BV
ಕನ್ನಡ ದಿನಪತ್ರಿಕೆ
10 ಮಾರ್ಚ್ | ರವಿವಾರ
10 MARCH 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...
₹4 | ಸಂಪುಟ – 5 ಸಂಚಿಕೆ – 20 ಪುಟ – 4 | RNI. KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟ ಪ್ರಕರಣ: ಮತ್ತೆ ಮೂವರು ವಶಕ್ಕೆ




ಬೆಂಗಳೂರು: 'ದಿ ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟಕ್ಕೆ ಸಂಚು ರೂಪಿಸಿದ್ದ' ಅನುಮಾನದ ಮೇರೆಗೆ ಶಂಕಿತ ಉಗ್ರ ಮಿನಾಜ್ ಅಲಿಯಾಸ್ ಸುಲೇಮಾನ್‌ನನ್ನು (26) ಕಸ್ಟಡಿಗೆ ಪಡೆದಿದ್ದ ರಾಷ್ಟ್ರೀಯ ತನಿಖಾ ದಳದ (ಎನ್‌ಐಎ) ಅಧಿಕಾರಿಗಳು, ಮತ್ತೆ ಮೂವರು ಶಂಕಿತ ಉಗ್ರರನ್ನು ವಶಕ್ಕೆ ಪಡೆದಿದ್ದಾರೆ.

ಶಂಕಿತರು ಮತ್ತೊಂದು ಸ್ಫೋಟಕ್ಕೆ ಸಂಚು ರೂಪಿಸಿರುವ ಬಗ್ಗೆ ಅನುಮಾನ ವ್ಯಕ್ತಪಡಿಸಿರುವ ತನಿಖಾ ಸಂಸ್ಥೆಗಳು, ರಾಜ್ಯದಲ್ಲಿ ಕಟ್ಟೆಚ್ಚರ ವಹಿಸುವಂತೆ ಪೊಲೀಸರಿಗೆ ಮಾಹಿತಿ ರವಾನಿಸಿದ್ದಾರೆ. ತನಿಖಾ ಸಂಸ್ಥೆಗಳ ಮಾಹಿತಿಯಿಂದ ಎಚ್ಚೆತ್ತಿರುವ ರಾಜ್ಯದ ಆಯಾ ಕಮಿಷನರೇಟ್ ಹಾಗೂ ಜಿಲ್ಲಾ ಪೊಲೀಸರು, ತಮ್ಮ ವ್ಯಾಪ್ತಿಯ ದೇವಸ್ಥಾನಗಳು ಹಾಗೂ ಜನನಿಬಿಡ ಸಾರ್ವಜನಿಕ ಸ್ಥಳಗಳಲ್ಲಿ ಬಿಗಿ ಭದ್ರತೆ ಕೈಗೊಂಡಿದ್ದಾರೆ.

ಶುಕ್ರವಾರ ಮಹಾ ಶಿವರಾತ್ರಿ ಹಬ್ಬದ ಇದ್ದಿದ್ದರಿಂದ ರಾಜ್ಯದ ಹಲವು ಜಿಲ್ಲೆಗಳಲ್ಲಿನ ಶಿವನ ದೇವಸ್ಥಾನದಲ್ಲಿ ಬಾಂಬ್ ನಿಷ್ಕ್ರಿಯ ದಳದ ಸಿಬ್ಬಂದಿ ತಪಾಸಣೆ ನಡೆಸಿದರು. ಜೊತೆಗೆ, ದೇವಸ್ಥಾನಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿಯೂ ಶೋಧ ನಡೆಸಿದರು.

## ಹುಬ್ಬಳ್ಳಿಯಲ್ಲಿ ದುಷ್ಕೃತ: ಅಪ್ರಾಪ್ತ ಬಾಲಕಿ ಮೇಲೆ ಗ್ಯಾಂಗ್ ರೇಪ್




ಹುಬ್ಬಳ್ಳಿ: ಅಪ್ರಾಪ್ತ ಬಾಲಕಿ ಯನ್ನು ಮೊಬೈಲ್ ಫೋನ್ ಕೊಡಿಸುವ ನೆಪದಲ್ಲಿ ಹುಬ್ಬಳ್ಳಿಗೆ ಕರೆತಂದಿದ್ದ ಯುವಕನೋರ್ವ ತನ್ನ ಗೆಳೆಯರ ಜೊತೆ ಸೇರಿಕೊಂಡು ಗ್ಯಾಂಗ್ ಲೈಂಗಿಕ ಕಿರುಕಳ ಮಾಡಿದ ಪ್ರಕರಣ ಹುಬ್ಬಳ್ಳಿಯಲ್ಲಿ ತಡವಾಗಿ ಬೆಳಕಿಗೆ ಬಂದಿದೆ.

ಜೀವ ಬೆದರಿಕೆ ಹಾಕಿ ಬಲವಂತವಾಗಿ ನಾಲ್ವರು ಕಾಮುಕರು ಅಪ್ರಾಪ್ತ ಬಾಲಕಿ ಮೇಲೆ ಲೈಂಗಿಕ ಕಿರುಕಳ ಮಾಡಿದ ಘಟನೆ ಹುಬ್ಬಳ್ಳಿಯ ಬೈಪಾಸ್ ರಿಂಗ್ ರೋಡ್ ಬ್ರಿಡ್ಜ್ ಬಳಿ ಬುಧವಾರ ನಡೆದಿದ್ದು ಪ್ರಕರಣ ತಡವಾಗಿ ಬೆಳಕಿಗೆ ಬಂದಿದೆ.

ಸಂತ್ರಸ್ತೆ ಜೊತೆಗೆ ಕೆಲ ದಿನಗಳಿಂದ ಫೋನ್‌ನಲ್ಲಿ ಓರ್ವ ಯುವಕ ಮಾತನಾಡುತ್ತಿದ್ದ. ಇಬ್ಬರ ನಡುವೆ ಸ್ನೇಹ ಸಹ ಬೆಳೆದಿತ್ತು. ಈ ಸಲುಗೆಯಿಂದ ಮೊಬೈಲ್ ಕೊಡಿಸುವ ಆಮಿಷ ತೋರಿಸಿ, ಬಾಲಕಿಯನ್ನು ಗ್ರಾಮದಿಂದ ಹುಬ್ಬಳ್ಳಿಗೆ ಕರೆಸಿದ್ದ.

ಬಾಲಕಿ ಜೊತೆಗೆ ಸಿಟಿ ಸುತ್ತಿ, ನಂತರ ಖಾಸಗಿ ಹೋಟೆಲ್‌ವೊಂದಕ್ಕೆ ಕರೆದುಕೊಂಡು ಹೋದ ಯುವಕ ತನ್ನ ಮತ್ತೊಬ್ಬ ಸ್ನೇಹಿತನ ಜೊತೆ ಸೇರಿಕೊಂಡು ಬಾಲಕಿ ಮೇಲೆ ಹಲ್ಲೆ ನಡೆಸಿದ್ದಾನೆ.

## ಮಾಜಿ ಕಾಂಗ್ರೆಸ್ ಶಾಸಕ ನಿಧನ



ಮೈಸೂರು: ಮಾಜಿ ಕಾಂಗ್ರೆಸ್ ಶಾಸಕ ವಾಸು (72) ತೀವ್ರ ಅನಾರೋಗ್ಯದಿಂದ ಶನಿವಾರ ನಿಧನರಾಗಿದ್ದಾರೆ.

ಮಾಜಿ ಶಾಸಕ ವಾಸು ಅವರು ಕೆಲ ತಿಂಗಳಿನಿಂದ ಅನಾರೋಗ್ಯದಿಂದ ಬಳಲುತ್ತಿದ್ದರು. ಇವರು ಮೇಯರ್ ವಾಸು ಎಂದೇ ಖ್ಯಾತರಾಗಿದ್ದರು. ಅಲ್ಲದೇ ಚಾಮರಾಜನಗರ ಕ್ಷೇತ್ರದ ಶಾಸಕರಾಗಿ ಕೆಲಸ ಮಾಡಿದ್ದರು.

ವಿದ್ಯಾವಿಕಾಸ ಎಂಜಿನಿಯರಿಂಗ್ ಕಾಲೇಜು ನಡೆಸುತ್ತಿದ್ದ ಇವರು ಸ್ಥಳೀಯ ಪ್ರಜಾನುಡಿ ಪತ್ರಿಕೆಯನ್ನೂ ನಡೆಸುತ್ತಿದ್ದರು. ಕಳೆದ ವಿಧನಸಭಾ ಚುನಾವಣೆಯಲ್ಲಿ ವಾಸು ಅವರು ಚಾಮರಾಜನಗರ ಕ್ಷೇತ್ರದಿಂದ ಕಾಂಗ್ರೆಸ್ ಟಿಕೆಟ್ ಬಯಸಿದ್ದರು. ಆದರೆ ಅವರಿಗೆ ಟಿಕೆಟ್ ಸಿಕ್ಕಿರಲಿಲ್ಲ.



## ಎಟಿಎಂ ದರೋಡೆ: ಮೂವರ ಬಂಧನ

ಚಿಕ್ಕೋಡಿ: ಚಿಕ್ಕೋಡಿ ಪಟ್ಟಣ ಹಾಗೂ ತಾಲ್ಲೂಕಿನ ಅಂಕಲಿಯಲ್ಲಿ ಕಳೆದ ನ.9ರಂದು ಎಟಿಎಂ ದೋಚಿ ತಲೆಮರೆಸಿಕೊಂಡಿದ್ದ ಮೂವರು ಆರೋಪಿಗಳನ್ನು ಬೀದರ್ ಜಿಲ್ಲಾ ಪೊಲೀಸರು ಬಂಧಿಸಿದ್ದು, ಚಿಕ್ಕೋಡಿ ಪೊಲೀಸರು ಗುರುವಾರ ತಮ್ಮ ಸುಪರ್ದಿಗೆ ತೆಗೆದುಕೊಂಡಿದ್ದಾರೆ.

ಹರಿಯಾಣ ಮೂಲದ ಶಾಹಿದ್ ಕಮಲಖಾನ್ (45), ಅಲೀಮ್ ಅಕ್ಬರ ಖಾನ್ (26), ಇಲಿಯಾಸ್ ಅಬ್ದುಲ್ ರೆಹಮಾನ್ ಖಾನ್ (45) ಬಂಧಿತರು.

ಚಿಕ್ಕೋಡಿ ಪಟ್ಟಣದಲ್ಲಿ ಎಸ್ಬಿಐ ಎಟಿಎಂ ಹಾಗೂ ಅಂಕಲಿ ಗ್ರಾಮದ ಎಕ್ಸಿಸ್ ಬ್ಯಾಂಕ್ ಎಟಿಎಂ ಗಳನ್ನು ಗ್ಯಾಸ್ ಕಟ–ರ್ನಿಂದ ಒಡೆದು ರೂ 23 ಲಕ್ಷಕ್ಕೂ ಹೆಚ್ಚು ಹಣವನ್ನು ದೋಚಿದ್ದರು. ಅಂದಿನಿಂದ ಚಿಕ್ಕೋಡಿ ಪೊಲೀಸರು ಕಳ್ಳರಿಗಾಗಿ ಬಲೆ ಬೀಸಿದ್ದರು. ಬೀದರ್ ಜಿಲ್ಲೆಯ ಹಳ್ಳಿಖೇಡ ಪಟ್ಟಣದಲ್ಲಿ ಎಟಿಎಂ ಒಡೆಯುವಾಗ ಆರೋಪಿಗಳನ್ನು ಪೊಲೀಸರು ಬಂಧಿಸಿದ್ದರು.

ಕರ್ನಾಟಕ, ಮಹಾರಾಷ್ಟ್ರ, ತೆಲಂಗಾಣ, ಹರಿಯಾಣ ರಾಜ್ಯಗಳಲ್ಲಿ 12 ಎಟಿಎಂಗಳಲ್ಲಿ ಬಂಧಿತ ಆರೋಪಿಗಳು ಕಳವು ಮಾಡಿದ್ದರು. ಚಿಕ್ಕೋಡಿ, ಅಂಕಲಿ ಠಾಣೆ ಪೊಲೀಸರು ಕಳೆದ ನಾಲ್ಕು ತಿಂಗಳಿನಿಂದ ಎಟಿಎಂ ಕಳ್ಳರ ಪತ್ತೆಗಾಗಿ ಬಲೆ ಬೀಸಿದ್ದರು. ಬಂಧಿತರಿಂದ ರೂ9.5 ಲಕ್ಷ ನಗದು, ರೂ15 ಲಕ್ಷ ಮೌಲ್ಯದ ಕಾರ್, ಕಳ್ಳತನಕ್ಕೆ ಬಳಸುತ್ತಿದ್ದ ಆಕ್ಸಿಜನ್ ಸಿಲಿಂಡರ್, ಗ್ಯಾಸ್ ಸಿಲಿಂಡರ್, ವಿವಿಧ ನಂಬರ್ ಪ್ಲೇಟ್ ಸೇರಿದಂತೆ ಹಲವು ವಸ್ತುಗಳನ್ನು ವಶಕ್ಕೆ ಪಡೆದುಕೊಳ್ಳಲಾಗಿದೆ.

# ಬಿಜೆಪಿ ಯಾರನ್ನೇ ಕಣಕ್ಕಿಳಿಸಿದರೂ ನಮಗೆ ಭಯ ಇಲ್ಲ: ದಿನೇಶ್ ಗುಂಡೂರಾವ್

ಬೆಂಗಳೂರು: 'ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರಕ್ಕೆ ಬಿಜೆಪಿ ಡಾ. ಮಂಜುನಾಥ್ ಇಲ್ಲವೇ ಯಾರನ್ನೇ ಕಣಕ್ಕಿಳಿಸಿದರೂ ನಮಗೆ (ಕಾಂಗ್ರೆಸ್) ಭಯ ಇಲ್ಲ. ರಾಜಕೀಯ ಎಂದು ಬಂದಾಗ ಹೋರಾಟ ಇದ್ದಿದ್ದೆ' ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಸುದ್ದಿಗಾರರ ಜೊತೆ ಶನಿವಾರ ಮಾತನಾಡಿದ ಅವರು, 'ಹೈಕಮಾಂಡ್ ಸೂಚಿಸಿದರೆ ಸಚಿವರು, ಶಾಸಕರು ಯಾರೇ ಆದರೂ ಸ್ಪರ್ಧಿಸಲು ಸಿದ್ಧವಾಗಿ ಇರಬೇಕಾಗುತ್ತದೆ' ಎಂದರು.

'ಬೆಂಗಳೂರು ಗ್ರಾಮಾಂತರದಲ್ಲಿ ಬಿಜೆಪಿ, ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ಯಾರೇ ಸ್ಪರ್ಧಿಸಲಿ. ನಮಗೆ ಯಾರನ್ನು ನಿಲ್ಲಿಸಿದರೂ ಭಯ ಇಲ್ಲ. ಡಾ. ಮಂಜುನಾಥ್ ಅವರ ಬಗ್ಗೆ ಗೌರವ ಇದೆ. ವೃತ್ತಿಯಲ್ಲಿ ನಮ್ಮ ಸರ್ಕಾರ ಕೂಡ ಅವರಿಗೆ ಸಹಕಾರ ನೀಡಿದೆ. ಈ ಹಿಂದೆ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಆಗಿದ್ದಾಗ ಮಂಜುನಾಥ್ ಅವರನ್ನು ವೃತ್ತಿಯಲ್ಲಿ ಮುಂದುವರಿಸಿದ್ದರು. ಈಗಲೂ ಮತ್ತೆ ನಮ್ಮ ಸರ್ಕಾರ ಬಂದ ಮೇಲೆಯೂ ಅವರನ್ನು ಮುಂದುವರೆಸಲಾಗಿತ್ತು. ಅವರಿಗೆ ಎಲ್ಲ ಗೌರವವನ್ನೂ ಕೊಟ್ಟಿದ್ದೇವೆ. ಆದರೆ, ರಾಜ–



ಕೀಯ ಎಂದು ಬಂದಾಗ ನೋಡೋಣ' ಎಂದರು.

ಕಲುಷಿತ ವ್ಯವಸ್ಥೆಯಲ್ಲಿ ಮಂಜುನಾಥ್ ರಾಜಕೀಯಕ್ಕೆ ಬರುವುದು ಬೇಡ ಎಂಬ ಎಚ್. ಡಿ. ದೇವೇಗೌಡ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ದಿನೇಶ್, 'ದೇವೇಗೌಡರು ರಾಜಕೀಯ ಕಲುಷಿತ ಎಂದು ಹೇಳಿದ್ದಾರೆ. ಹಾಗಾದರೆ ಕುಮಾರಸ್ವಾಮಿ ಕಲುಷಿತನಾ? ರೇವಣ್ಣ ಕಲುಷಿತನಾ? ಮಂಜುನಾಥ್ ಅವರು ವೃತ್ತಿಯಲ್ಲಿ ಹೆಸರು ಮಾಡಿದ್ದಾರೆ. ರಾಜ–ಕೀಯವಾಗಿ ಹೆಸರು ಕಳೆದುಕೊಳ್ಳೋದು ಬೇಡ ಎಂಬ ಉದ್ದೇಶದಿಂದ ಹೇಳಿರಬಹುದು' ಎಂದರು. ನಮ್ಮ ಗ್ಯಾರಂಟಿ ಪದವನ್ನೇ ನಕಲು: 'ನಮಗೆ ಇದು ಬಹಳ ಮುಖ್ಯವಾದ ಚುನಾವಣೆ. ಪ್ರಜಾಪ್ರಭುತ್ವ ಉಳಿಯಬೇಕಾದರೆ ಬಿಜೆಪಿ ತೊಲಗಬೇಕು. ಈಗಾಗಲೇ ಕರಾಳ ದಿನಗಳು ಆರಂಭವಾಗಿವೆ. ಬಿಜೆಪಿಯವರು ನಮ್ಮ ಗ್ಯಾರಂಟಿ ಪದವನ್ನೇ ನಕಲು ಮಾಡಿದ್ದಾರೆ. ನಮ್ಮ ಗ್ಯಾರಂಟಿ ಬಗ್ಗೆ ಮೋದಿ ಏನೆಲ್ಲಾ ಮಾತಾಡಿದ್ದರು. ನಾವು ಮಾಡಿದಾಗ ಮೋದಿ ಲೇವಡಿ ಮಾಡಿದರು. ಈಗ ಅವರು ಏನು ಮಾಡುತ್ತಿದ್ದಾರೆ. ಅವರು ನೀಡಿದ್ದ ಭರವಸೆಯಂತೆ ಉದ್ಯೋಗ ಕೊಟ್ಟರಾ? ಕಪ್ಪು ಹಣ ತಂದರಾ? ಖಾತೆಗೆ ಹಣ ಹಾಕಿದ್ದಾರಾ? ವಿರೋಧಿಗಳನ್ನು ಮುಗಿಸಲು ಏನು ಬೇಕೋ ಅದನ್ನು ಮಾಡುತ್ತಿದ್ದಾರೆ' ಎಂದು ವಾಗ್ದಾಳಿ ನಡೆಸಿದರು. ಸಚಿವರ ಸ್ಪರ್ಧೆ: ಸಚಿವರ ಸ್ಪರ್ಧೆ ಕುರಿತು ಮಾತನಾಡಿದ ಅವರು, 'ನಮ್ಮ ತಯಾರಿ ನಾವು ಮಾಡುತ್ತಿದ್ದೇವೆ. ಇನ್ನೂ ಎರಡು, ಮೂರು ಹಂತಗಳಲ್ಲಿ ಪಟ್ಟಿ ಪ್ರಕಟವಾಗಲಿದೆ. ಕರ್ನಾಟಕದಲ್ಲಿ ಹೆಚ್ಚು ಸ್ಥಾನಗಳು ಬರಬೇಕು ಎಂಬ ಗುರಿ ಇದೆ. ಜನರ ಜೊತೆ ಯಾರು ಒಳ್ಳೆಯ ಹೆಸರು ತೆಗೆದುಕೊಂಡಿದ್ದಾರೋ ಅವರೇ ಸ್ಪರ್ಧಿಸಬೇಕಾಗುತ್ತದೆ. ವರಿಷ್ಠರು ಯಾವುದೇ ತೀರ್ಮಾನ ತೆಗೆದುಕೊಂಡರೂ ನಾವು ಸಿದ್ಧ ಆಗಿರಬೇಕಾಗುತ್ತದೆ. ಸಚಿವರು, ಶಾಸಕರು, ಪರಿಷತ್ ಸದಸ್ಯರು ಯಾರೇ ಆಗಿರಲಿ. ಹೈಕಮಾಂಡ್ ಹೇಳಿದ ಮೇಲೆ ಸ್ಪರ್ಧಿಸಬೇಕಾಗುತ್ತದೆ' ಎಂದರು.

## ಕಾಳಜಿ ಇಲ್ಲದ ದರಿದ್ರ ಸರ್ಕಾರ ಬರಗಾಲ ನಿರ್ವಹಿಸುವಲ್ಲಿ ವಿಫಲ; ಬಿ ವೈ ವಿಜಯೇಂದ್ರ ಕಿಡಿ



ಬೆಂಗಳೂರು: ರಾಜ್ಯದಲ್ಲಿ ಭೀಕರ ಕ್ಷಾಮದ ಪರಿಸ್ಥಿತಿ ಎದುರಾಗಿದೆ. ಬರಗಾಲ ನಿರ್ವಹಿಸುವಲ್ಲಿ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರಕಾರ ಸಂಪೂರ್ಣ ವಿಫಲವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಟೀಕಿಸಿದ್ದಾರೆ.

ಮಲ್ಲೇಶ್ವರದ ಬಾವುರಾವ್ ದೇಶಪಾಂಡೆ ಭವನದಲ್ಲಿ ಶನಿವಾರ ಅವರು ವಿಕಸಿತ ಭಾರತ ಎಲ್.ಇ.ಡಿ ಪ್ರಚಾರ ವಾಹನಗಳ ಉದ್ಘಾಟನೆ ಕಾರ್ಯಕ್ರಮದಲ್ಲಿ ಮಾತನಾಡಿದರು. ರಾಜ್ಯದಲ್ಲಿ ಭೀಕರ ಬರಗಾಲ ಇದೆ. 800ಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಉತ್ತರ ಕರ್ನಾಟಕದಲ್ಲಿ ಬರದ ಸಮಸ್ಯೆಯಿಂದ ಕುಡಿಯುವ ನೀರಿಗೂ ಹಾಹಾಕಾರ ಇದೆ. ರಾಜ್ಯದ ಮುಖ್ಯಮಂತ್ರಿಗಳು ತಮ್ಮ ಜವಾಬ್ದಾರಿ ಮರೆತಿದ್ದಾರೆ ಎಂದು ವಿಜಯೇಂದ್ರ ಆರೋಪಿಸಿದರು.

ಕಾಳಜಿ ಇಲ್ಲದ ಸರಕಾರ ಇದು. ದರಿದ್ರ ಸರಕಾರ ಇದೆಂದು ಸಾಮಾನ್ಯ ಜನರು ಹೇಳುತ್ತಿದ್ದಾರೆ. ಸೋಮವಾರ ಬೆಂಗಳೂರಿನಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಆಗ್ರಹಿಸಿ ಪ್ರತಿಭಟನೆ ನಡೆಸಲು ನಗರ ಜಿಲ್ಲಾಧ್ಯಕ್ಷರಿಗೆ ತಿಳಿಸಿದ್ದೇನೆ ಎಂದು ವಿಜಯೇಂದ್ರ ತಿಳಿಸಿದರು. ಡಿ.ಕೆ.ಶಿವಕುಮಾರ್ ಅವರು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರಕ್ಕೆ ತಮ್ಮನ್ನು ಸೀಮಿತಗೊಳಿಸಿದ್ದಾರೆ.

ಬೆಂಗಳೂರಿನ ನೀರಿನ ಸಮಸ್ಯೆಯತ್ತ ಗಮನ ಕೊಡುತ್ತಿಲ್ಲ. ಕುಡಿಯುವ ನೀರಿನ ವಿಚಾರದಲ್ಲೂ ರಾಜಕೀಯ ಮಾಡುತ್ತಿದ್ದಾರೆ ಎಂದು ದೂರಿದರು.

# ಇಂದು ಬೆಳಗಾವಿ ವಿಮಾನ ನಿಲ್ದಾಣದ ಹೊಸ ಟರ್ಮಿನಲ್ ಕಾಮಗಾರಿಗೆ

## ಪ್ರಧಾನಿ ಮೋದಿ ಅವರಿಂದ ಚಾಲನೆ–ಸಂಸದ ಈರಣ್ಣ ಕಡಾಡಿ

ಬೆಳಗಾವಿ: ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ರೂ.357 ಕೋಟಿ ವೆಚ್ಚದಲ್ಲಿ 16,400 ಚದರ ಮೀಟರ್ ವಿಸ್ತೀರ್ಣದಲ್ಲಿ ನಿರ್ಮಾಣವಾಗಲಿರುವ ಹೊಸ ಟರ್ಮಿನಲ್ ಕಾಮಗಾರಿಗೆ ಇಂದು ಮುಂಜಾನೆ 11.40 ಗಂಟೆಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ವರ್ಚೂವಲ್ ಮೂಲಕ ಚಾಲನೆ ನೀಡಲಿದ್ದಾರೆ ಎಂದು ಎಂದು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಅವರು ಹೇಳಿದ್ದಾರೆ.

ಶನಿವಾರ ಮಾ–09 ರಂದು ಪತ್ರಿಕಾ ಹೇಳಿಕೆ ನೀಡಿದ ಸಂಸದ ಈರಣ್ಣ ಕಡಾಡಿ ಅವರು ಈ ಹೊಸ ಟರ್ಮಿನಲ್‌ನಲ್ಲಿ ನಾಲ್ಕು ಏರೋಬ್ರಿಡ್ಜ್, ತಲಾ 8 ಎಕ್‌ಲೇಟರ್, ಲಿಫ್ಟ್, ಏಕಕಾಲಕ್ಕೆ ಹೊರ ಹೋಗುವ ಮತ್ತು ಒಳ ಬರುವ 2,400 ಪ್ರಯಾಣಿಕರನ್ನು ನಿರ್ವಹಿಸುವ ಸಾಮರ್ಥ್ಯವನ್ನು ಹೊಸ ಟರ್ಮಿನಲ್ ಹೊಂದಲಿದೆ. ಏಕಕಾಲಕ್ಕೆ 9 ವಿಮಾನಗಳ ನಿಲುಗಡೆ ವ್ಯವಸ್ಥೆ, ಟರ್ಮಿನಲ್ ಎದು–ರಿಗೆ 500 ಕಾರು, 200 ಬೈಕ್ ಇತರೆ ವಾಹನಗಳ ಪಾರ್ಕಿಂಗ್‌ಗೆ ಅವಕಾಶ ಇದೆ ಎಂದರು.

ಈ ವಿಮಾನ ನಿಲ್ದಾಣ ಅಂತಾರಾಷ್ಟ್ರೀಯ ಮಟ್ಟಕ್ಕೆ ಮೇಲ್ದರ್ಜೆಗೇರಿಸಲು ಪ್ರಯತ್ನಿಸಲಾಗುತ್ತಿದೆ. ನವದೆಹಲಿ, ಮುಂಬೈ ಸೇರಿದಂತೆ ದೇಶದ ಅನೇಕ ಮಹಾನಗರಗಳಿಗೆ ಬೆಳಗಾವಿಯಿಂದ



ನೇರವಾಗಿ ವಿಮಾನಯಾನ ಸಂಪರ್ಕ ಇದೆ. ಮುಂಬರುವ ದಿನಗಳಲ್ಲಿ ಹೆಚ್ಚಿನ ವಿಮಾನ ಸೇವೆ ಸಿಗಲಿದ್ದು, ಇದು ಉತ್ತರ ಕರ್ನಾಟಕ ಜನರಿಗೆ ಅನುಕೂಲ ಆಗಲಿದೆ. ಬೆಳಗಾವಿ ವಿಮಾನ ನಿಲ್ದಾಣದಿಂದ ಬೆಂಗಳೂರು, ದೆಹಲಿ, ಮುಂಬೈ, ಹೈದರಾಬಾದ್, ಅಹಮದಾಬಾದ್, ಸೂರತ್, ನಾಗುರ, ತಿರುಪತಿ, ಜೋಧಪುರ, ಜೈಪುರ ಸೇರಿದಂತೆ 10 ನಗರಗಳಿಗೆ ವಿಮಾನ ಸಂಚಾರವಿದೆ. ಪ್ರತಿ ದಿನ ಸರಾಸರಿ 24 ವಿಮಾನಗಳು ಬೆಳಗಾವಿ ವಿಮಾನ ನಿಲ್ದಾಣದ ಮೂಲಕ ಸಂಚಾರ ಕೈಗೊಳ್ಳುತ್ತವೆ. ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಹೊಸ ಟರ್ಮಿನಲ್ ನಿರ್ಮಾಣದ ಗುತ್ತಿಗೆಯನ್ನು ಕೆಎಂವಿ ಪ್ರಾಜೆಕ್ಟ್ ಕಂಪನಿ ಗುತ್ತಿಗೆ ಪಡೆದುಕೊಂಡಿದೆ. ಉದ್ದೇಶಿತ ಹೊಸ ಟರ್ಮಿನಲ್ ಏಕಕಾಲಕ್ಕೆ 2400 ಪ್ರಯಾಣಿಕರಿಗೆ ಸ್ಥಳಾವಕಾಶ ಒದಗಿಸಲಿದೆ.

ವಿಮಾನ ನಿಲ್ದಾಣದಲ್ಲಿ ಸದ್ಯ ಟರ್ಮಿನಲ್ 3,600 ಚದರ ಮೀಟ–ರ್ ವಿಸ್ತೀರ್ಣದ್ದಾಗಿದೆ. ಏಕಕಾಲಕ್ಕೆ ಬೆಳಗಾವಿ ವಿಮಾನ ನಿಲ್ದಾಣದಿಂದ ಬೇರೆ ನಗರಗಳಿಗೆ ತೆರಳುವ 320 ಮತ್ತು ಇತರೆ ನಗರಗಳಿಂದ ಬೆಳಗಾವಿಗೆ ಬರುವ 320 ಪ್ರಯಾಣಿಕರು ಸೇರಿ ಒಟ್ಟು 640 ಪ್ರಯಾಣಿಕರಿಗೆ ಟರ್ಮಿನಲ್‌ನಲ್ಲಿ ಸ್ಥಳಾವಕಾಶ ಇರಲಿದೆ ಎಂದು ತಿಳಿಸಿದ್ದಾರೆ.

## ಮಾ. 17 ಕ್ಕೆ ರಾಹುಲ್ ಗಾಂಧಿ ನ್ಯಾಯ ಯಾತ್ರೆ ಸಮಾರೋಪ: ಮುಂಬೈನಲ್ಲಿ ಮೊಳಗಲಿದೆ ಕೈ ಪಡೆ ಚುನಾವಣೆಗೆ ರಣಕಹಳೆ

ಮುಂಬೈ: 'ರಾಹುಲ್ ಗಾಂಧಿ ನೇತೃತ್ವದ ಭಾರತ್ ಜೋಡೊ ನ್ಯಾಯ ಯಾತ್ರೆಯು ಮಾರ್ಚ್ 17ರಂದು ಮುಂಬೈನಲ್ಲಿನ ಶಿವಾಜಿ ಪಾರ್ಕ್‌ನಲ್ಲಿ ರ್‍ಯಾಲಿಯೊಂದಿಗೆ ಸಮಾರೋಪಗೊಳ್ಳಲಿದ್ದು, ಇದೇ ಸಂದರ್ಭ ಲೋಕಸಭಾ ಚುನಾವಣೆಗೆ ರಣಕಹಳೆ ಮೊಳಗಲಿದೆ' ಎಂದು ಮಹಾರಾಷ್ಟ್ರ ಕಾಂಗ್ರೆಸ್ ಘಟಕದ ಅಧ್ಯಕ್ಷ ನಾನಾ ಪಟೋಲೆ ತಿಳಿಸಿದರು.

'ಇದೇ 12ರಂದು ನಂದುರ್‌ಬಾರ್‌ನಿಂದ ಯಾತ್ರೆಯು ಮಹಾರಾಷ್ಟ್ರ ಪ್ರವೇಶಿಸಲಿದೆ. ಇದಕ್ಕೆ ಸಂಬಂಧಿಸಿದ ಸಕಲ ಸಿದ್ಧತೆಗಳು ಪೂರ್ಣಗೊಂಡಿವೆ. ಅನುಮತಿಯೂ ಸಿಕ್ಕಿದೆ' ಎಂದು ಹೇಳಿದರು.




'ಶರದ್ ಪವಾರ್ ನೇತೃತ್ವದ ಎನ್‌ಸಿಪಿ, ಉದ್ಧವ್ ಸಾರಥ್ಯದ ಶಿವಸೇನೆ ಹಾಗೂ ಮಹಾ ವಿಕಾಸ್ ಅಘಾಡಿಯ ಮುಖಂಡರು ಈ ರ್‍ಯಾಲಿಯಲ್ಲಿ ಭಾಗಿಯಾಗಲಿದ್ದಾರೆ' ಎಂದು ಅವರು ಮಾಹಿತಿ ನೀಡಿದರು.

'ಸಮರ್ಥ ಅಭ್ಯರ್ಥಿಗಳು ಇಲ್ಲದಿರುವುದ–ರಿಂದ ಬಿಜೆಪಿಯು ವಿರೋಧ ಪಕ್ಷದಲ್ಲಿನ ನಾಯಕರನ್ನು ಕದಿಯುತ್ತಿದೆ' ಎಂದು ದೂ–ರಿದ ಪಟೋಲೆ, 'ಬಿಜೆಪಿಯು ತನ್ನ ಮೊದಲ ಪಟ್ಟಿಯಲ್ಲಿ ನಾಗ್ಪುರದಿಂದ ರಾಷ್ಟ್ರೀಯ ನಾಯಕ ನಿತಿನ್ ಗಡ್ಕರಿ ಹೆಸರು ಪ್ರಕಟಿಸಿಲ್ಲ. ಕಾಂಗ್ರೆಸ್ ಇಲ್ಲಿ ಸಮರ್ಥ ಅಭ್ಯರ್ಥಿಯನ್ನು ಹೊಂದಿದ್ದು, ಈ ಬಾರಿ ಗೆಲುವು ಸಾಧಿಸಲಿದೆ' ಎಂದು ಹೇಳಿದರು.

ಪಕ್ಷದ ರಾಜ್ಯ ಉಸ್ತುವಾರಿ ರಮೇಶ್ ಚೆನ್ನಿತ್ತಲ ಸಮ್ಮುಖದಲ್ಲಿ ಯಾತ್ರೆಗೆ ಸಂಬಂಧಿಸಿದಂತೆ ಕಾಂಗ್ರೆಸ್ ನಾಯಕರು ಗುರುವಾರ ಪರಿಶೀಲನಾ ಸಭೆ ನಡೆಸಿದರು.

## ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟ: ಬಾಂಬರ್‌ನ ಭಾವಚಿತ್ರಗಳನ್ನು ಬಿಡುಗಡೆ ಮಾಡಿದ NIA



ಬೆಂಗಳೂರು: ನಗರದ 'ದಿ ರಾಮೇಶ್ವರಂ ಕೆಫೆ'ಯಲ್ಲಿ ನಡೆದಿದ್ದ ಬಾಂಬ್ ಸ್ಫೋಟ ಪ್ರಕರಣದ ತನಿಖೆ ಆರಂಭಿಸಿರುವ ರಾಷ್ಟ್ರೀಯ ತನಿಖಾ ದಳವು (ಎನ್‌ಐಎ) ಶಂಕಿತ ಆರೋಪಿಯ ಭಾವಚಿತ್ರಗಳನ್ನು ಸಾಮಾಜಿಕ ಮಾಧ್ಯಮಗಳಲ್ಲಿ ಹಂಚಿಕೊಂಡಿದೆ.

ಸಿ.ಸಿ.ಟಿ.ವಿ. ಕ್ಯಾಮೆರಾದ ದೃಶ್ಯಾವಳಿ ಆಧಾರದಲ್ಲಿ ಆರೋಪಿಯ ಭಾವಚಿತ್ರಗಳನ್ನು ಬಿಡುಗಡೆ ಮಾಡಲಾಗಿದೆ. ಜೀನ್ಸ್ ಪ್ಯಾಂಟ್ ಧ–ರಿಸಿರುವ ಆರೋಪಿಯು ತಲೆಗೆ ಕ್ಯಾಪ್ ಹಾಗೂ ಮುಖಕ್ಕೆ ಮಾಸ್ಕ್ ಹಾಕಿರುವುದನ್ನು ಕಾಣಬಹುದಾಗಿದೆ.

ಈ ಕುರಿತು ಸಾರ್ವಜನಿಕ ಪ್ರಕಟಣೆ ಹೊರಡಿಸಿರುವ ಎನ್‌ಐಎ, ಮಾಹಿತಿ ನೀಡಿದವರ ಹೆಸರನ್ನು ಗೋಪ್ಯವಾಗಿ ಇಡಲಾಗುವುದು ಎಂದು ತಿಳಿಸಿದೆ.

ಶಂಕಿತನ ಸುಳಿವು ಲಭಿಸಿದ ಕೂಡಲೇ 080 29510900, 8904241100 ಹಾಗೂ ವಿಳಾಸ **info.blr.nia@gov.in** ಗೆ ಮಾಹಿತಿ ನೀಡಬಹುದು ಎಂದು ಅಧಿಕಾರಿಗಳು ಕೋರಿದ್ದಾರೆ.

ಶಂಕಿತ ಆರೋಪಿಯು ಬಿಎಂಟಿಸಿ ಬಸ್‌ನಲ್ಲಿ ಓಡಾಟ ನಡೆಸಿರುವ ಎರಡು ವಿಡಿಯೊಗಳನ್ನು ಶುಕ್ರವಾರ ಎನ್‌ಐಎ ಬಿಡುಗಡೆ ಮಾಡಿತ್ತು.

ಬಸ್‌ನಲ್ಲಿ ಅಳವಡಿಸಿದ್ದ ಸಿ.ಸಿ.ಟಿ.ವಿ. ಕ್ಯಾಮೆರಾದ ದೃಶ್ಯಾವಳಿ ಆಧಾರದಲ್ಲಿ ಆರೋಪಿಯ ವಿಡಿಯೊ ಬಿಡುಗಡೆ ಮಾಡಲಾಗಿ–ತ್ತು. ಆರೋಪಿಯು ಬಸ್‌ನಲ್ಲಿ ಕುರಿತು ಪ್ರಯಾಣಿಸುತ್ತಿರುವ ದೃಶ್ಯ ಸೆರೆಯಾಗಿತ್ತು.

ಇತ್ತೀಚೆಗೆ ಶಂಕಿತ ಆರೋಪಿ ಫೋಟೊವನ್ನು ಬಿಡುಗಡೆ ಮಾಡಿದ್ದ ಎನ್‌ಐಎ, ಸುಳಿವು ನೀಡಿದವರಿಗೆ ರೂ 10 ಲಕ್ಷ ಬಹುಮಾನ ನೀಡುವುದಾಗಿ ಘೋಷಿಸಿತ್ತು.

## ನನಗೆ ಟಿಕೆಟ್ ತಪ್ಪಿಸಲು ಪಿತೂರಿ ನಡೆಯುತ್ತಿದೆ: ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ



ಬೆಳಗಾವಿ: ಲೋಕಸಭೆ ಚುನಾವಣೆಯಲ್ಲಿ ಟಿಕೆಟ್ ತಪ್ಪಿಸಲು ನನ್ನ ಕ್ಷೇತ್ರದಲ್ಲಿ ನನ್ನ ವಿರುದ್ಧ ಪಿತೂರಿ ನಡೆಯುತ್ತಿದೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆರೋಪಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉಡುಪಿ – ಚಿಕ್ಕಮಗಳೂರು ಕ್ಷೇತ್ರದಲ್ಲಿ ನನ್ನ ವಿರುದ್ಧ ಅನೇಕ ನಾಯಕರು ಪಿತೂರಿ ನಡೆಸುತ್ತಿದ್ದಾರೆ.

ಈ ರೀತಿ ವಿರೋಧ ವ್ಯಕ್ತವಾದಾಗ ನಮ್ಮ ನಾಯಕರು ನಮ್ಮ ಬಗ್ಗೆ ಮಾಹಿತಿ ಕಲೆ ಹಾಕುತ್ತಾರೆ. ನಮ್ಮವರು ವಿರೋಧ ಮಾಡಿದ ಕಾರಣಕ್ಕೆ ನನಗೆ ಅನುಕೂಲ ಆಗಿದೆ. ಇಲ್ಲವಾದರೆ ಶೋಭಾ ಒಳ್ಳೆಯ ಕೆಲಸ ಮಾಡ್ತಿದ್ದಾರೆ, ಪಕ್ಷದ ಕೆಲಸ ಮಾಡುತ್ತಾರೆ ಎಂದಷ್ಟೇ ಹೇಳುತ್ತಿದ್ದರು ಎಂದರು.

ಶೋಭಾರನ್ನು ಏಕೆ ವಿರೋಧ ಮಾಡುತ್ತಿದ್ದಾರೆ ಎಂದು ಪಕ್ಷದ ನಾಯಕರೂ ಮಾಹಿತಿ ಕಲೆ ಹಾಕುತ್ತಿದ್ದಾರೆ. ಆಗಲೇ ಸತ್ಯ ಗೊತ್ತಾಗೋದು, ನಮ್ಮ ವ್ಯಕ್ತಿತ್ವವೇನು? ನಮ್ಮ ಅಭಿವೃದ್ಧಿ ಕೆಲಸಗಳು ಏನೆಂಬುದು ಗೊತ್ತಾಗುತ್ತವೆ.

ಚುನಾವಣೆ ಸಮಯ ಬಹಳಷ್ಟು ಸೂಕ್ಷ್ಮತೆಯಿಂದ ಕೂಡಿರುತ್ತದೆ. ಮಾಹಿತಿ ಸಂಗ್ರಹದಿಂದ ನನಗೆ ಅನುಕೂಲ ಆಗಲಿದೆಯೇ ಹೊರತು ಕೆಟ್ಟದಾಗಲ್ಲ. ಅದಕ್ಕಾಗಿ ನಮ್ಮ ಹೈಕಮಾಂಡ್ ಬಗ್ಗೆ ನನಗೆ ನಂಬಿಕೆಯಿದೆ, ಕೆಲಸದ ಆಧಾರದ ಮೇಲೆ ಟಿಕೆಟ್ ಸಿಗುತ್ತದೆ ಎಂದು ಭರವಸೆ ವ್ಯಕ್ತಪಡಿಸಿದರು.

ಕೆಲಸ ಮಾಡಿದವರಿಗೆ ಅವಕಾಶ ಸಿಕ್ಕಿಯೇ ಸಿಗುತ್ತದೆ. ಪಕ್ಷದ ಕೆಲಸ ಕೊಡಲಿ, ಸರ್ಕಾರದ ಕೆಲಸ ಕೊಡಲಿ ಪ್ರಮಾಣಿಕ ಸೇವೆ ಸಲ್ಲಿಸಿದ ಸಂತೃಪ್ತಿ ನನಗಿದೆ. ಇದು ಎಲ್ಲರಿಗೂ ಅನ್ವಯ ಆಗುತ್ತದೆ. ನಮ್ಮ ಶ್ರಮ, ನಮ್ಮ ಕೆಲಸವನ್ನು ಹೈಕಮಾಂಡ್ ಗುರುತಿಸುತ್ತದೆ ಎಂಬುದಕ್ಕೆ ನಾನೇ ಉದಾಹರಣೆ ಎಂದು ಹೇಳಿದರು.

ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಯ ಬಹಳಷ್ಟು ಹಾಲಿ ಸಂಸದರಿಗೆ ಟಿಕೆಟ್ ಮಿಸ್ ಆಗುತ್ತದೆ ಎಂಬ ಚರ್ಚೆಯ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಈ ಬಗ್ಗೆ ನಮಗ್ಯಾ–ರಿಗೂ ಗೊತ್ತಿಲ್ಲ. ಗೆಲ್ಲುವ ಪಕ್ಷದಿಂದ ಬಹಳಷ್ಟು ಜನರು ಟಿಕೆಟ್ ಕೇಳುವುದು ಸಹಜ, ಅದು ತಪ್ಪಲ್ಲ. ಹಲವು ವರ್ಷಗಳಿಂದ ಪಕ್ಷಕ್ಕಾಗಿ ದುಡಿದ ನಮ್ಮ ಕಾರ್ಯಕರ್ತರಿಗೆ ಟಿಕೆಟ್ ಕೇಳುವ ಹಕ್ಕಿದೆ ಎಂದು ಹೇಳಿದರು.

## ತ್ಯಾಗ ಮಾಡಿ ಬಂದ ನನಗೆ ಟಿಕೆಟ್ ನಿಡಬೇಕೆಂದ ಮಾಜಿ ಸಚಿವ ಬಿ.ಸಿ. ಪಾಟೀಲ್




ಹಾವೇರಿ: ಈ ಕ್ಷೇತ್ರದ ಲೋಕಸಭಾ ಟಿಕೆಟ್ ನನಗೆ ಕೊಡಬೇಕು, ನಾವು ತ್ಯಾಗ ಮಾಡಿ ಬಂದವರು ಎಂದು ಮಾಜಿ ಸಚಿವ ಬಿಸಿ ಪಾಟೀಲ್ ಹೇಳಿದ್ದಾರೆ.

ಹಿರೇಕೆರೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗ ಮನೆಯಲ್ಲಿ ಕೂತುಕೊಂಡಿದ್ದೇವೆ. ನಮಗೆ ಹೆದರಿಸೋದು ಬೆದರಿಸೋದು ಗೊತ್ತಿಲ್ಲ. ಸೈಲೆಂಟ್ ಆಗಿ ಇದ್ದೀವಿ ಎಂದರೆ ಅದು ನಮ್ಮ ದೌರ್ಬಲ್ಯ ಎಂದು ಭಾವಿಸಬಾರದು. ಈಗಾಗಲೇ ಬೊಮ್ಮಾಯಿ ಸಿಎಂ ಆಗಿದ್ದಾರೆ. ನಾನು ಹಾವೇರಿ ಹಾಗೂ ಗದಗ ಜಿಲ್ಲೆಗಳ ಉಸ್ತುವಾರಿಯಾಗಿ ಕೆಲಸ ಮಾಡಿದ್ದೇನೆ. ನನಗೆ ಟಿಕೆಟ್ ಕೊಡಬೇಕು ಎಂದು ಅವರು ಬೇಡಿಕೆ ಇಟ್ಟಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಹಾಗೂ ಮಾಜಿ ಸಿಎಂ ಯಡಿಯೂರಪ್ಪ ಅವರನ್ನು ಭೇಟಿಯಾಗಿದ್ದೇನೆ. ಹಾಗೆಂದು ನಾನು ಟಿಕೆಟ್ ಬೆನ್ನತ್ತಿಕೊಂಡು ಹೋಗುವವನಲ್ಲ. ನನಗೆ ಕೊಡಬೇಕು ಎಂದು ವಾದ ಮಾಡುತ್ತಿದ್ದೇನೆ. ಸಿಗಲಿಲ್ಲ ಎಂದರೆ ಕಾರ್ಯಕರ್ತರ ಜೊತೆ ಮಾತಾನಾಡುತ್ತೇನೆ. ನನಗೆ ನಂದೇ ಹಾದಿ ಇದೆ ಎಂದು ಬಿಜೆಪಿ ಬಿಜೆಪಿ ನಾಯಕರಿಗೆ ಎಚ್ಚರಿಕೆ ಸಂದೇಶ ರವಾನಿಸಿದ್ದೇನೆಂದು ತಿಳಿಸಿದ್ದಾರೆ.

ಯಡಿಯೂರಪ್ಪನವರೇ ಕಾಂತೇಶ್ ಜೊತೆ ನಿಂತು ಗೆಲ್ಲಿಸಿಕೊಂಡು ಬರೋದಾಗಿ ಮಾತುಕೊಟ್ಟಿದ್ದಾರೆ ಎಂಬ ಈಶ್ವರಪ್ಪ ಹೇಳಿಕೆ ವಿಚಾರವಾಗಿ, ಯಡಿಯೂರಪ್ಪನವರೇ ಆ ಮಾತು ಹೇಳಬೇಕಲ್ವಾ? ಅವರು ಹೇಳಿದರೆ ಆ ಪ್ರಕಾರ ನಡೆದುಕೊಳ್ಳಬೇಕಾಗುತ್ತೆ.

## ದೇವಸ್ಥಾನಗಳಿಗೆ ರೂ3.60 ಕೋಟಿ ಅನುದಾನ: ಶಾಸಕ ಗಣೇಶ ಹುಕ್ಕೇರಿ



ಚಿಕ್ಕೋಡಿ: 2023–24ನೇ ಸಾಲಿನ ಮುಖ್ಯಮಂತ್ರಿಗಳ ವಿಶೇಷ ಅನುದಾನ (ಮುಜರಾಯಿ) ಅಡಿಯಲ್ಲಿ ಚಿಕ್ಕೋಡಿ–ಸದಲಗಾ ಮತಕ್ಷೇತ್ರದ 22 ಗ್ರಾಮಗಳ ವಿವಿಧ ದೇವಸ್ಥಾನಗಳ ಜೀರ್ಣೋದ್ಧಾರ ಮತ್ತು ಕಟ್ಟಡ ನಿರ್ಮಾಣಕ್ಕಾಗಿ ರೂ3.60 ಕೋಟಿ ಬಿಡುಗಡೆ ಮಾಡಲಾಗಿದೆ. ಕಾಡಾಪುರದ ಕೇದಾರೇಶ್ವರ ದೇವಸ್ಥಾನಕ್ಕೆ ರೂ5 ಲಕ್ಷ, ಇಂಗಳಿ ಗ್ರಾಮದ ಬಸವೇಶ್ವರ ದೇವಸ್ಥಾನಕ್ಕೆ ರೂ30 ಲಕ್ಷ, ನೇಜ ಗ್ರಾಮದ ಹಾಲಸಿದ್ಧೇಶ್ವರ ದೇವಸ್ಥಾನಕ್ಕೆ ರೂ15 ಲಕ್ಷ, ಜನವಾಡದ ಮಹಾದೇವ ಸ್ವಾಮಿ ಧರ್ಮಮಠಕ್ಕೆ ರೂ20 ಲಕ್ಷ, ಪಟ್ಟಣಕುಡಿಯ ದತ್ತ ದೇವಾಲಯಕ್ಕೆ ರೂ10 ಲಕ್ಷ, ಗಿರಗಾಂವದ ಹನುಮಾನ ದೇವಾಲಯಕ್ಕೆ ರೂ6 ಲಕ್ಷ, ಯಕ್ಸಂಬಾ ಪಟ್ಟಣದ ಶಿವರಾಮ ಕಾರಂತ ನಗರದ ಹನುಮಾನ ದೇವಸ್ಥಾನಕ್ಕೆ ರೂ7 ಲಕ್ಷ, ಶಿರಗಾಂವದ ಹನುಮಾನ ದೇವಸ್ಥಾನಕ್ಕೆ 7 ಲಕ್ಷ, ಚಿಕ್ಕೋಡಿ ಪಟ್ಟಣದ ಮರಗುಬಾಯಿ ದೇವಸ್ಥಾನಕ್ಕೆ ರೂ10 ಲಕ್ಷ, ಮಲಿಕವಾಡದ ಬಸವೇಶ್ವರ ದೇವಾಲಯಕ್ಕೆ ರೂ50 ಲಕ್ಷ, ಪಟ್ಟಣದ ಮಾಳಿ ಸಮಾಜ ಸೇವಾ ಸಂಘದ ಸಮುದಾಯ ಭವನಕ್ಕೆ ರೂ20 ಲಕ್ಷ, ಧುಳಗಣವಾಡಿಯ ಹನುಮಾನ ಮಂದಿರಕ್ಕೆ ರೂ15 ಲಕ್ಷ ಅನುದಾನ ಬಂದಿದೆ.

# ಈ ವರ್ಷ 10 ಸಾವಿರ ಶಿಕ್ಷಕರ ನೇಮಕಾತಿಗೆ ಚಿಂತನೆ: ಸಚಿವ ಮಧು ಬಂಗಾರಪ್ಪ

ಕಲಬುರಗಿ: ರಾಜ್ಯದ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಹಿನ್ನೆಲೆ, ಈ ವರ್ಷ ಇನ್ನೂ 10 ಸಾವಿರ ಶಿಕ್ಷಕರ ನೇಮಕಾತಿ ಕುರಿತು ಚಿಂತನೆ ನಡೆಸಲಾಗಿದೆ ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಶುಕ್ರವಾರ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದ ನಂತರ ಶಿಕ್ಷಕರ ನೇಮಕಾತಿ ಪ್ರಕ್ರಿಯೆ ಚುರುಕುಗೊಳಿಸಿ 14 ಸಾವಿರ ಶಿಕ್ಷಕರ ನೇಮಕಾತಿ ಮಾಡಿಕೊಳ್ಳಲಾಗಿದೆ, ಇದರಲ್ಲಿ 12 ಸಾವಿರ ಜನರು ಈಗಾಗಲೆ ಶಾಲೆಗೆ ಹಾಜರಾಗಿದ್ದಾರೆ. 800ರಿಂದ 900 ಜನ ವಿವಿಧ ಕಾರಣದಿಂದ ಕೋರ್ಟ್ ಮೊರೆ ಹೋಗಿದ್ದು, ಆ ಸಮಸ್ಯೆ ಸಹ ಶೀಘ್ರ ಬಗೆಹರಿಯಲಿದೆ. 12 ಸಾವಿರ ಪೈಕಿ 3,900 ಶಿಕ್ಷಕರನ್ನು ಕಲ್ಯಾಣ ಕರ್ನಾಟಕ ಭಾಗಕ್ಕೆ ನಿಯೋಜಿಸಲಾಗಿದೆ. 43 ಸಾವಿರ ಅತಿಥಿ ಶಿಕ್ಷಕರನ್ನು ನೇಮಿಸಲಾಗಿದೆ ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೆ.ಕೆಆರ್ಡಿ.ಬಿ. ಮಂಡಳಿ 2,618 ಅತಿಥಿ ಶಿಕ್ಷಕರ ನೇಮಕ ಮಾಡಿಕೊಂಡಿದ್ದು ಸ್ವಾಗತಾರ್ಹ. ಆಗಾಗ ನಿವೃತ್ತ ಕಾರಣ ಶಿಕ್ಷಕರ ಕೊರತೆ ಹೆಚ್ಚಿರುವುದರಿಂದ, ಈ ವರ್ಷ ಇನ್ನು 10 ಸಾವಿರ ಶಿಕ್ಷಕರ ಭರ್ತಿಗೆ ಚಿಂತನೆ ನಡೆದಿದೆ. ಒಟ್ಟಾರೆಯಾಗಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಗುಣಮಟ್ಟದ ಶಿಕ್ಷಣ ಮತ್ತು ಸಮಾನತೆ ಕಲ್ಪಿಸಲು ಆದ್ಯತೆ ನೀಡುವುದಾಗಿ ತಿಳಿಸಿದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಶಿಕ್ಷಕರ ಸಮಸ್ಯೆ ಇರುವುದು ನಿಜ. ಇದನ್ನು ಹಂತ ಹಂತವಾಗಿ ಪರಿಹಾರ ಕಂಡುಕೊಳ್ಳಲಾಗುವುದು. ಕೆ.ಕೆ.ಆರ್ಡಿ.ಬಿ. ಅನುದಾನ ನೀಡುತ್ತದೆ ಎಂದು ಶಿಕ್ಷಣ ಇಲಾಖೆಯು ತನ್ನ ಅನುದಾನ ಕಡಿಮೆ ಮಾಡಲ್ಲ, ಬದಲಿಗೆ ಹೆಚ್ಚಿನ ಹಣವನ್ನೇ ಈ ಭಾಗಕ್ಕೆ ನೀಡಲಿದೆ ಎಂದರು.

ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿ.ಯು.ಸಿ. ಪರೀಕ್ಷೆಯನ್ನು ಒಂದೇ ತಿಂಗಳಿನಲ್ಲಿ ಮೂರು ಬಾರಿ ಪರೀಕ್ಷೆ ಬರೆಯುವುದರಿಂದ ಪರೀಕ್ಷೆಯ ಗಂಭೀರ್ಯತೆ ಇರುವುದಿಲ್ಲ ಎಂಬ ಪ್ರಶ್ನೆಗೆ ಉತ್ತರಿಸಿ, ಮೊದಲನೇ ಪರೀಕ್ಷೆ ಎಲ್ಲರಿಗೂ ಕಡ್ಡಾಯವಾಗಿರಲಿದೆ. ಎರಡನೇ ಮತ್ತು ಮೂರನೇ ಪರೀಕ್ಷೆ ಉತ್ತಮ ಅಂಕ ಹೊಂದಲು ಮತ್ತು ಉತ್ತೀರ್ಣರಾಗಿ ಮುಂದಿನ



ತರಗತಿಗೆ ಪ್ರವೇಶ ಪಡೆಯಲು ಅನುಕೂಲವಾಗಲೆಂದು ಈ ಪದ್ಧತಿ ಜಾರಿಗೆ ತರಲಾಗಿದೆ. ಕಳೆದ ವರ್ಷ ಮೂರನೇ ಪರೀಕ್ಷೆಯಲ್ಲಿ ಹಾಜರಾದ 1.20 ಲಕ್ಷ ಮಕ್ಕಳಲ್ಲಿ 40 ಸಾವಿರ ಮಕ್ಕಳು ತೇರ್ಗಡೆಯಾಗಿ ಮುಂದಿನ ತರಗತಿಗೆ ಪ್ರವೇಶ ಪಡೆದಿದ್ದಾರೆ. ಇದರಿಂದ ಆ ಮಕ್ಕಳ ಒಂದು ವರ್ಷ ಉಳಿದಂತಾಗಿದೆ. ಇಲ್ಲದಿದ್ದರೆ ಆ ಮಕ್ಕಳ ಶಾಲೆಯಿಂದ ವಿಮುಖರಾರುವ ಪರಿಸ್ಥಿತಿ ನಿರ್ಮಾಣವಾಗುತ್ತಿತ್ತು. ಮೂರು ಪರೀಕ್ಷೆ ಪದ್ಧತಿಗೆ ಮಕ್ಕಳಿಂದಲೂ ಸಹ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ ಎಂದು ಪರೀಕ್ಷೆ ಕುರಿತಂತೆ ಸಚಿವರು ಸಮರ್ಥನೆ ಮಾಡಿಕೊಂಡರು.

ಪ್ರಸಕ್ತ 2024-25ನೇ ಸಾಲಿನ ಆಯವ್ಯದಲ್ಲಿ ರಾಜ್ಯದಾದ್ಯಂತ 500 ಕರ್ನಾಟಕ ಪಬ್ಲಿಕ್ ಆರಂಭಿಸಲು ಘೋಷಿಸಿದ್ದು, ಇದರಲಿ 137 ಶಾಲೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ಆರಂಭವಾಗಲಿವೆ. ರಾಜ್ಯದಲ್ಲಿ 297 ಕೆ.ಪಿ.ಎಸ್. ಶಾಲೆ ಇದ್ದು, ಇದರ ಜೊತೆಗೆ ಈ ವರ್ಷ 500 ಶಾಲೆ ಆರಂಭಿಸಲಾಗುವುದು. ದ್ವಿಭಾಷಾ ಬೋಧನೆ, ವಿಷಯ ಶಿಕ್ಷಕರ ಜೊತೆಗೆ ದೈಹಿಕ, ಸಂಗೀತ ಶಿಕ್ಷಕರು, ಉತ್ತಮ ಮೂಲಸೌಕರ್ಯ, ಶಾಲಾ ಮೈದಾನ ಪರಿಕಲ್ಪನೆ ಒಳಗೊಂಡಿರುವ ಕೆ.ಪಿ.ಎಸ್. ಶಾಲೆಗೆ ಬೇಡಿಕೆ ಹೆಚ್ಚಿರುವ ಕಾರಣ ಮುಂದಿನ 3 ವರ್ಷದಲ್ಲಿ ಎರಡು ಗ್ರಾಮ ಪಂಚಾಯತಿಗಳಿಗೆ ತಲಾ ಒಂದರಂತೆ 3,000 ಕೆ.ಪಿ.ಎಸ್. ಶಾಲೆ ಆರಂಭಿಸಲು ನಿರ್ಧರಿಸಲಾಗಿದೆ. ಇದರಿಂದ ಸರ್ಕಾರಿ ಶಾಲೆಯಿಂದ ವಿಮುಖ ಮಾಡಿದವರನ್ನು ಮತ್ತೆ ಸರ್ಕಾರಿ ಶಾಲೆಯತ್ತ ಸೆಳೆಯುವುದರ ಜೊತೆಗೆ ದ್ವಿಭಾಷಾ ಬೋಧನೆಯಲ್ಲಿ ಮಕ್ಕಳು, ಪಾಲಕರಿಗೆ ಅವರ ಆಯ್ಕೆಯ ಭಾಷೆಯಲ್ಲಿಯೆ ಶಿಕ್ಷಣ ನೀಡಲು ಅವಕಾಶ ಕಲ್ಪಿಸಲಾಗುತ್ತಿದೆ ಎಂದರು.

ರಾಜ್ಯದ್ಯಾಂತ ಇರುವ ಆದರ್ಶ ವಿದ್ಯಾಲಯದಲ್ಲಿ 11 ಮತ್ತು 12ನೇ ತರಗತಿ ಬೋಧನೆಗೆ ಈಗಾಗಲೆ ಆದೇಶ ಹೊರಡಿಸಿದೆ. ಶಾಲೆಗಳಿಗೆ ಮ್ಯಾನೇಜ್ಮೆಂಟ್ ಅನುದಾನ ಇಲ್ಲದೆ ಶಾಲೆಗೆ ನೀಡಲಾದ ಗಣಕಯಂತ್ರಗಳು ಧೂಳು ತಿನ್ನುತ್ತಿದ್ದವು. ಗೃಹ ಜ್ಯೋತಿ ಯೋಜನೆಯಡಿ ಕಳೆದ ನವೆಂಬರ್ 1 ರಿಂದ ಶಾಲೆಗಳಿಗೆ ಉಚಿತ ವಿದ್ಯುತ್ ಘೋಷಣೆ ಪರಿಣಾಮ ಸ್ಮಾರ್ಟ್ ಕ್ಲಾಸ್ ನಡೆಯುತ್ತಿದ್ದು, ಗಣಕಯಂತ್ರಗಳು ಮಕ್ಕಳ ಉಪಯೋಗಕ್ಕೆ ಬಂದಿವೆ. ಇದಲ್ಲದೆ ಶಾಲೆಗಳಲ್ಲಿ ಸ್ವಚ್ಛತಾ ಕಾರ್ಯ ಸೇರಿದಂತೆ ಇನ್ನಿತರ ಕಾರ್ಯಗಳಿಗೆ ನಿರ್ವಹಣಾ ವೆಚ್ಚ 20 ರಿಂದ 40 ಸಾವಿರ ರೂ. ಗಳಿಗೆ ಅನುದಾನ ಹೆಚ್ಚಿಸಿದೆ. ಈ ಹಿಂದೆ 8ನೇ ತರಗತಿ ವರೆಗೆ ಶಾಲಾ ಮಕ್ಕಳಿಗೆ ವಾರದಲ್ಲಿ ಒಮ್ಮೆ ಮೊಟ್ಟೆ ನೀಡಲಾಗುತ್ತಿತ್ತು, ನಮ್ಮ ಸರ್ಕಾರ ಬಂದ ನಂತರ ವಾರದಲ್ಲಿ 2 ಬಾರಿ ಮೊಟ್ಟೆ ನೀಡಲಾಗುತ್ತಿದ್ದು, ಇದನ್ನು 10ನೇ ತರಗತಿ ವರೆಗೆ ವಿಸ್ತರಿಸಿದೆ. ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಪೌಷ್ಠಿಕ ಆಹಾರ ನೀಡುವತ್ತ ಸಹ ಇಲಾಖೆ ಗಮನಹರಿಸುತ್ತಿದೆ ಎಂದರು.



# ಜನರ ತೆರಿಗೆ ಹಣವನ್ನು ಬಡವರ ಕಲ್ಯಾಣಕ್ಕೆ ಬಳಸಲಾಗಿದೆ: ಕೇಂದ್ರ ಸಚಿವ ಅನುರಾಗ್ ಠಾಕೂರ್

ಬೆಂಗಳೂರು: ಕೇಂದ್ರ ಸರ್ಕಾರ ಜನರ ತೆರಿಗೆ ಹಣವನ್ನು ಬಡವರ ಕಲ್ಯಾಣಕ್ಕೆ ಬಳಸಿದೆ ಎಂದು ಕೇಂದ್ರ ಕ್ರೀಡಾ, ಯುವ ವ್ಯವಹಾರ ಮತ್ತು ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅನುರಾಗ್ ಠಾಕೂರ್ ಅವರು ಶುಕ್ರವಾರ ಹೇಳಿದರು.


ಶುಕ್ರವಾರ ನಗರದ ಚರ್ಚ್ ಸ್ಟ್ರೀಟ್ನ ಬಿ ಹೈವ್ ಪ್ರೀಮಿಯಂನಲ್ಲಿ ನಡೆದ 'ಬೆಂಗಳೂರಿನ ವಿಕಸಿತ ಭಾರತ ರಾಯಭಾರಿಗಳ ಸಮಾವೇಶ'ದಲ್ಲಿ ಮಾತನಾಡಿದ ಅವರು, ಜನರು ಪ್ರಾಮಾಣಿಕವಾಗಿ ತೆರಿಗೆ ಕಟ್ಟುತ್ತಿದ್ದು, ತೆರಿಗೆ ಹಣವನ್ನು ಉತ್ತಮ ಬಳಕೆಗಾಗಿ ಬಳಸುತ್ತೇವೆ. ಪ್ರತಿಯೊಂದು ಪೈಸೆಯನ್ನೂ ಬಡವರ ಕಲ್ಯಾಣಕ್ಕಾಗಿ ಮತ್ತು ರಾಷ್ಟ್ರದ ಅಭಿವೃದ್ಧಿಗಾಗಿ ಬಳಕೆ ಮಾಡಲಾಗುತ್ತಿದೆ. ಇದು ಭವಿಷ್ಯದಲ್ಲಿಯೂ ಮುಂದುವರಿಯುತ್ತದೆ ಎಂದು ಹೇಳಿದರು.

ಕಳೆದ 10 ವರ್ಷಗಳ ಪ್ರಧಾನಿ ಮೋದಿಯವರ ಅಧಿಕಾರಾವಧಿಯ ಬಗ್ಗೆ ಮಾತನಾಡಿ, ಮೋದಿ ಅವರು ಭ್ರಷ್ಟಾಚಾರ ಮುಕ್ತ ಮತ್ತು ಅಭಿವೃದ್ಧಿ ಪರ ಆಡಳಿತ ನೀಡಿದ್ದಾರೆ. ಭವಿಷ್ಯದಲ್ಲಿಯೂ ಭ್ರಷ್ಟಾಚಾರ ರಹಿತ ಆಡಳಿತ ದೊರೆಯಲಿದೆ. ನೇರ ಫಲಾನುಭವಿ ವರ್ಗಾವಣೆ ಮೂಲಕ ಹಣ ಕಳುಹಿಸುವುದರಿಂದ ಮಧ್ಯವರ್ತಿಗಳಿಲ್ಲದೆ ಜನರು ಹಣ ಪಡೆಯುತ್ತಿದ್ದಾರೆ. ಭಾರತವು ಜಗತ್ತಿನಾದ್ಯಂತ ವೇಗವಾಗಿ ಬೆಳೆಯುತ್ತಿರುವ ರಾಷ್ಟ್ರಗಳಲ್ಲಿ ಒಂದಾಗಿದೆ. ಕ್ರೀಡೆಯಿಂದ ಬಾಹ್ಯಾಕಾಶದವರೆಗೆ ಉತ್ತಮ ಸಾಧನೆ ಮಾಡಿದ್ದೇವೆ ಎಂದು ತಿಳಿಸಿದರು.

2004-14ರ ನಡುವೆ ಗರಿಷ್ಠ ಹಣದುಬ್ಬರ ಇತ್ತು. ಅದು ಶೇ 10ಕ್ಕಿಂತ ಹೆಚ್ಚಾಗಿತ್ತು. ಗರಿಷ್ಠ ವಿದೇಶಿ ಸಾಲವೂ ನಮ್ಮ ದೇಶದ್ದಾಗಿತ್ತು. ಹಗರಣಗಳು, ಅಸಮರ್ಪಕ ನೀತಿ ಮೊದಲಾದವು ಇವುಗಳಿಗೆ ಕಾರಣವಾಗಿದ್ದವು. ಆದರೆ, ತ್ವರಿತವಾಗಿ ನಿರ್ಧಾರ ತೆಗೆದುಕೊಳ್ಳುವ ಶೂನ್ಯ ಹಗರಣಗಳ ಆಡಳಿತ ನಮ್ಮದಾಗಿದ್ದು, ಅದು ಅಭಿವೃದ್ಧಿಗೆ ಪೂರಕ ಎಂದರು.

ಎಲ್ಪಿಜಿ ಸಿಲಿಂಡರ್ ಸಂಪರ್ಕ ಇಲ್ಲದ 10 ಕೋಟಿಗೂ ಹೆಚ್ಚು ಜನರಿಗೆ ಸಂಪರ್ಕ ಕೊಡಲಾಗಿದೆ. 12 ಕೋಟಿಗೂ ಹೆಚ್ಚು ಶೌಚಾಲಯ ನಿರ್ಮಿಸಿ ಕೊಡಲಾಗಿದೆ. ಜಲಜೀವನ್ ಮಿಷನ್ನಡಿ 14 ಕೋಟಿ ನಲ್ಲಿ ನೀರಿನ ಸಂಪರ್ಕವನ್ನು ಮನೆಗಳಿಗೆ ಕೊಡಲಾಗಿದೆ. ಪ್ರತಿ ಸೆಕೆಂಡಿಗೆ ಒಂದು ಹೊಸ ನಲ್ಲಿ ನೀರಿನ ಸಂಪರ್ಕ ನೀಡಿದ ಸಾಧನೆ ನಮ್ಮದು ಎಂದು ವಿವರಿಸಿದರು

## ಮಹಾಶಿವರಾತ್ರಿ ದಿನವೇ ಶಿವೈಕ್ಯಳಾದ 'ಲತಾ': ಹೃದಯಾಘಾತದಿಂದ ಧರ್ಮಸ್ಥಳದ ಆನೆ ವಿಧಿವಶ



ಧರ್ಮಸ್ಥಳ: ಶ್ರೀ ಕ್ಷೇತ್ರ ಧರ್ಮಸ್ಥಳ ಕ್ಷೇತ್ರದಲ್ಲಿ ಕಳೆದ 50 ವರ್ಷಗಳಿಂದ ಶ್ರೀ ಮಂಜುನಾಥನಿಗೆ ಸೇವೆ ಸಲ್ಲಿಸುತ್ತಿದ್ದ ಲತಾ ಎಂಬ ಹೆಸರಿನ ಆನೆ ನಿಧನ ಹೊಂದಿದೆ.

ಶಿವರಾತ್ರಿ ದಿನದಂದೇ ಶ್ರೀಕ್ಷೇತ್ರ ಧರ್ಮಸ್ಥಳದ ಲತಾ ಹೆಸರಿನ ಆನೆ ಮೃತಪಟ್ಟಿದೆ. ಆನೆ ಲತಾಗೆ 60 ವರ್ಷ ವಯಸ್ಸಾಗಿತ್ತು. ಅನಾರೋಗ್ಯದಿಂದ ಲತಾ ಮೃತಪಟ್ಟಿದೆ. ಕಳೆದ 50 ವರ್ಷಗಳಿಂದ ಆನೆ ಲತಾ ಶ್ರೀಕ್ಷೇತ್ರ ಧರ್ಮಸ್ಥಳದ ಸೇವೆಯಲ್ಲಿ ನಿರತವಾಗಿತ್ತು.

ಲತಾ ಸುಮಾರು 50 ವರ್ಷಗಳಿಂದ ಧರ್ಮಸ್ಥಳ ಜಾತ್ರಾಮಹೋತ್ಸವದಲ್ಲಿ ಗಾಂಭೀರ್ಯದ ಹೆಜ್ಜೆ ಹಾಕಿ ಭಕ್ತರ ಗಮನವನ್ನು ತನ್ನತ್ತ ಸೆಳೆಯುತ್ತಿತ್ತು. ಧರ್ಮಸ್ಥಳದಲ್ಲಿ ಪ್ರಸ್ತುತ ಲತಾ, ಲಕ್ಷ್ಮೀ ಹಾಗೂ ಶಿವಾನಿ ಎಂಬ ಹೆಸರಿನ ಆನೆಗಳಿದ್ದು, ಲತಾ ಸಾವಿನಿಂದ ಲಕ್ಷ್ಮೀ ಹಾಗೂ ಶಿವಾನಿ ಆನೆಗಳು ಮಂಕಾಗಿವೆ.

ಆನೆ ಸಾವಿನ ಸುದ್ದಿ ತಿಳಿದು ಸುತ್ತಮುತ್ತಲ ಭಕ್ತರು ದೇವಸ್ಥಾನದ ಬಳಿ ಆಗಮಿಸುತ್ತಿದ್ದಾರೆ. ದಕ್ಷಿಣಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ಧರ್ಮಸ್ಥಳದಲ್ಲಿ ಲತಾಳ ಅಂತ್ಯ ಸಂಸ್ಕಾರ ನಡೆದಿದೆ.

# ಟಿಕೆಟ್ ಕೊಡುವ ಬಗ್ಗೆ ಹೈಕಮಾಂಡ್ ತೀರ್ಮಾನ ಮಾಡುತ್ತದೆ, ವದಂತಿಗಳಿಗೆ ಕಿವಿಗೊಡಬೇಡಿ: ಕಾರ್ಯಕರ್ತರಿಗೆ ಪ್ರಹ್ಲಾದ್ ಜೋಶಿ

ಹುಬ್ಬಳ್ಳಿ: ಟಿಕೆಟ್ ಕೊಡುವ ಬಗ್ಗೆ ಹೈಕಮಾಂಡ್ ತೀರ್ಮಾನ ಮಾಡುತ್ತದೆ, ಊಹಾಪೋಹಗಳ ಬಗ್ಗೆ ಕಿವಿಗೊಡಬೇಡಿ ಎಂದು ಪಕ್ಷದ ಕಾರ್ಯಕರ್ತರಿಗೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾರು ಎಲ್ಲಿಂದ ಚುನಾವಣೆಗೆ ಸ್ಪರ್ಧಿಸಬೇಕು ಎಂಬುದರ ಕುರಿತು ಪಕ್ಷದ ಹೈಕಮಾಂಡ್ ಅಂತಿಮ ನಿರ್ಧಾರ ಕೈಗೊಳ್ಳಲಿದೆ. ಪಕ್ಷದ ಕಾರ್ಯಕರ್ತರು ಊಹಾಪೋಹಗಳಿಗೆ ಕಿವಿಕೊಡಬಾರದು. ವದಂತಿಗಳ ಹಬ್ಬಿಸಿ ಪಕ್ಷದ ಕಾರ್ಯಕರ್ತರಲ್ಲಿ ಗೊಂದಲ ಮೂಡಿಸುವುದು ಕೆಲವರ ಕೆಲಸವಾಗಿದೆ ಎಂದು ಹೇಳಿದರು.

ಹಳಬರಿಗೆ ಟಿಕೆಟ್ ಕೊಡಲ್ಲ, ಹೊಸಬರಿಗೆ ಅವಕಾಶ ಕೊಡ್ತಾರೆ ಅನ್ನೋದು ಊಹಾಪೋಹವಷ್ಟೆ. ಎಂಟು ಬಾರಿ ಗೆದ್ದವ-



ರಿಗೂ ಅವಕಾಶ ಕೊಟ್ಟಿದ್ದೇವೆ . ಪಾಕಿಸ್ತಾನ್ ಜಿಂದಾಬಾದ್ ಘೋಷಣೆ ಕೂಗಿದವನು ಕಾಂಗ್ರೆಸ್ ಪಾರ್ಟಿಗೆ ಹತ್ತಿರ ಇದ್ದಾನೆ. ನಾಸಿರ್ ಹುಸೇನ್ ಕನಿಷ್ಠ ಪಕ್ಷ ಕ್ಷಮೆ ಕೇಳಬೇಕು, ಕಾಂಗ್ರೆಸ್ನವರು ಕ್ಷಮೆ ಕೇಳಬೇಕು ಎಂದು ಒತ್ತಾಯಿಸಿದರು.

ಘೋಷಣೆ ಕೂಗಿದ ಆರೋಪಿ ರಾಹುಲ್ ಗಾಂಧಿ, ಸಿದ್ದರಾಮಯ್ಯ ಜೊತೆ ಫೋಟೋದಲ್ಲಿ ಇದ್ದಾನೆ. ಒಳಗೊಳಗೆ ಪುಷ್ಟೀಕರಣಕ್ಕೆ ತಲೆ ಮೇಲೆ ಕೂರಿಸಿಕೊಂಡು, ಅಪ್ಪಿ ಮುದ್ದಾಡುತ್ತಾರೆ. ಆರೋಪಿಗೆ ನಾಸಿರ್ ಹುಸೇನ್ ಆಶೀರ್ವಾದ ಇದೆ. ನಾಸಿರ್ ಹುಸೇನ್ ಬೇಷರತ್ ಕ್ಷಮೆ ಕೇಳಬೇಕು. ಅಲ್ಲಿಯವರೆಗೆ ಪ್ರಮಾಣ ವಚನ ಸ್ವೀಕರಿಸಬಾರದು ಎಂದು ಹೇಳಿದರು.

ಸುಧಾಮೂರ್ತಿಗೆ ರಾಜ್ಯಸಭೆಗೆ ನಾಮನಿರ್ದೇಶನ ವಿಚಾರಕ್ಕೆ ಪ್ರತಿಕ್ರಿಯೆ ನೀಡಿ, ಹುಬ್ಬಳ್ಳಿಯ ಹೆಮ್ಮೆಯ ಪುತ್ರಿ ಸುಧಾಮೂರ್ತಿ ಅವರನ್ನ ರಾಜ್ಯಸಭೆಗೆ ನಾಮ ನಿರ್ದೇಶನ ಮಾಡಿರುವುದು ಸಂತಸದ ವಿಷಯ. ಅವರು ಒಳ್ಳೆಯ ಲೇಖಕರಿದ್ದಾರೆ. ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಮಹಿಳಾ ದಿನಾಚರಣೆಯಂದೇ ಅವರನ್ನ ರಾಜ್ಯಸಭೆಗೆ ನಾಮನಿರ್ದೇಶನ ಮಾಡಿರುವುದು ಸಂತಸ ತಂದಿದೆ. ಸುಧಾಮೂರ್ತಿ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ. ಪ್ರಧಾನಿ ಮೋದಿಯವರಿಗೂ ನಾನು ಅಭಿನಂದನೆ ಸಲ್ಲಿಸುತ್ತೇನೆ ಎಂದರು.

# ಎನ್ಐಎಯಿಂದ ಮತ್ತೊಂದು ಚಾರ್ಜ್ ಶೀಟ್ ಸಲ್ಲಿಕೆ




ಬೆಂಗಳೂರು: ಶಿವಮೊಗ್ಗ ಟ್ರಯಲ್ ಬ್ಲಾಸ್ಟ್ ಮತ್ತು ಮಂಗಳೂರಿನ ಗೋಡೆ ಬರಹ ಪ್ರಕರಣಕ್ಕೆ ಸಂಬಂಧಿಸಿದಂತೆ ಎನ್ಐಎ ಅಧಿಕಾರಿಗಳು ಮತ್ತೊಬ್ಬ ಆರೋಪಿಯ ವಿರುದ್ಧ ಚಾರ್ಜ್ ಶೀಟ್ ಸಲ್ಲಿಸಿದ್ದಾರೆ.

ಮಂಗಳೂರಿನ ಎರಡು ಕಡೆ ಗೋಡೆ ಬರಹ ಬರೆಯಲು ಮೊಹಮ್ಮದ್ ಶಾರೀಕ್ ಮತ್ತು ಮಾಝ್ ಮುನೀರ್ ಗೆ ಪ್ರೇರಣೆ ನೀಡಿದ್ದ ಅರಾಫತ್ ಅಲಿ ಮತ್ತು ಇತರ ಇಬ್ಬರ ಬಗ್ಗೆ ಚಾರ್ಜ್ ಶೀಟ್ ನಲ್ಲಿ ಉಲ್ಲೇಖ ಮಾಡಲಾಗಿದೆ.

ಅರಾಫತ್, ಕೆಲ ಯುವಕರನ್ನು ಮತೀಯವಾದಕ್ಕೆ ಸೆಳೆದು ಅವರ ಮೂಲಕ ಮಂಗಳೂರಿನಲ್ಲಿ ಗೋಡೆ ಬರಹ ಬರೆಸಿದ್ದ. ಪ್ರಕರಣದಲ್ಲಿ ನಾಪತ್ತೆಯಾಗಿರುವ ಅಬ್ದುಲ್ ಮಥೀನ್ ತಾಹ ಮತ್ತು ಮುಸ್ಸವೀರ್ ಹುಸ್ಸೇನ್ ಶಹಬೇಜ್'ನ ಸೂಚನೆಯಂತೆ ಅರಾಫತ್ ಈ ಕೆಲಸ ಮಾಡಿದ್ದ. ಶಾರೀಖ್ ಅಹ್ಮದ್ ಎಂಬಾರತನ ಮೂಲಕ ಈ ಗೋಡೆ ಬರಹ ಬರೆಸಿದದ. ಗೋಡ ಬರಹ ಬರೆದವರಿಗೆ ವಿದೇಶಗಳಿಂದ ಸ್ವೀಕರಿಸಿದ ಕ್ರಿಪ್ಟೋಕರೆನ್ಸಿ ಹಣವನ್ನು ಬಳಸಿಕೊಂಡು ಹಣ ಪಾವತಿಸಿದ್ದ ಎಂದು ಎನ್ಐಎ ಆರೋಪಿಸಿದೆ.

ಅರಾಫತ್'ನ ಕಳೆದ ಸೆ.14ರಂದು ಕೀನ್ಯಾದಿಂದ ಆಗಮಿಸಿದ ವೇಳೆ ಎನ್ಐಎ ಅಧಿಕಾರಿಗಳು ಬಂಧಿಸಿದ್ದರು. ಇದಲ್ಲದೇ ಇದೇ ಪ್ರಕರಣ ಸಂಬಂಧ ಮಾಝ್ ಮುನೀರ್ ಅಹ್ಮದ್ ಹಾಗೂ ಮೊಹಮ್ಮದ್ ಶಾರೀಖ್ ವಿರುದ್ಧವೂ ಆರೋಪಪಟ್ಟಿ ದಾಖಲಿಸಿದೆ.

# ಚನ್ನರಾಯಪಟ್ಟಣ ಭೂ ಸ್ವಾಧೀನ ಹೋರಾಟಕ್ಕೆ 704 ದಿನ; ಸಿಎಂ ಮಾತು ಉಳಿಸಿಕೊಳ್ಳಲಿ

ದೇವನಹಳ್ಳಿ: ಭೂಮಿಯ ಉಳಿವಿಗಾಗಿ ಕಳೆದ ವರ್ಷದ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಹೋರಾಟನಿರತರನ್ನು ಭೇಟಿ ಮಾಡಿದ್ದ ಸಿದ್ದರಾಮಯ್ಯ ಅವರು, ಅಧಿಕಾರಕ್ಕೆ ಬಂದರೇ ಭೂ ಸ್ವಾಧೀನ ಕೈಬಿಡುತ್ತೇವೆ ಎಂದು ಭರವಸೆ ನೀಡಿದ್ದರು. ಅವರು ರೈತರಿಗೆ ನೀಡಿರುವ ಮಾತು ಉಳಿಸಿಕೊಳ್ಳಿ ಎಂದು ಚನ್ನರಾಯಪಟ್ಟಣ ಭೂ ಸ್ವಾಧೀನ ವಿರೋಧಿ ಹೋರಾಟ ಸಮಿತಿಯ ಸದಸ್ಯರು ಆಗ್ರಹಿಸಿದರು.

ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮುಖಂಡ ಶ್ರೀನಿವಾಸ್, 13 ಹಳ್ಳಿಗಳ ನೂರಾರು ರೈತರು ಕೃಷಿ ಭೂಮಿಯ ಉಳಿವಿಗಾಗಿ 704 ದಿನದಿಂದ ಧೀರ್ಘ ಹೋರಾಟ ಮಾಡುತ್ತಿದ್ದರೂ, ನಮ್ಮ ಧ್ವನಿ ಕೇಳುವವರು ಯಾರು ಇಲ್ಲದಂತಾಗಿದೆ ಎಂದು ಬೇಸರಿಸಿದರು.

ಚನ್ನರಾಯಪಟ್ಟಣದ ಗ್ರಾ.ಪಂ ಅಧ್ಯಕ್ಷ ಮಾರೇಗೌಡ ಮಾತನಾಡಿ, ವಿವಿಧ ಕಾಮಗಾರಿಗಳ ಭೂಮಿ ಚಾಲನೆ ನೀಡಲು ಮಾರ್ಚ್ 11ರಂದು(ಸೋಮವಾರ) ಮುಖ್ಯಮಂತ್ರಿ




ದೇವನಹಳ್ಳಿಗೆ ಆಗಮಿಸುತ್ತಿದ್ದಾರೆ. ಅದೇ ಕಾರ್ಯಕ್ರಮದಲ್ಲಿ ಭೂ ಸ್ವಾಧೀನ ಪ್ರಕ್ರಿಯೆ ಕೈಬಿಡುವ ಕುರಿತು ಘೋಷಣೆ ಮಾಡಬೇಕು ಎಂದು ಆಗ್ರಹಿಸಿದರು.

ಪ್ರತಿ ಬಾರಿ ರೈತರ ನಿಯೋಗ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಅವರನ್ನು ಭೇಟಿ ಮಾಡಿದಾಗ, ಸರ್ಕಾರ ರೈತ ಪರ ನಿಲುವು ಕೈಗೊಳ್ಳುತ್ತದೆ ಎಂದು ಆಶ್ವಾಸನೆ ನೀಡಿದ್ದಾರೆ. ಸೋಮವಾರದ ಕಾರ್ಯಕ್ರಮದಲ್ಲಿ 'ನುಡಿದಂತೆ ನಡೆದು ದೇವನಹಳ್ಳಿ ರೈತರ ಕಣ್ಣೀರು ಹೊರೆಸಲಿ' ಎಂದು ಮನವಿ ಮಾಡಿದರು.

ವಕೀಲ ಸಿದ್ದಾರ್ಥ್ ಮಾತನಾಡಿ, ಕಾಂಗ್ರೆಸ್ ಮುಖಂಡರು ರೈತರೊಂದಿಗೆ ಚೆಲ್ಲಾಟ ಆಡುವುದನ್ನು ಬಿಟ್ಟುಬಿಡಿ. ಸೋಮವಾರದ ಸಮಾವೇಶವೇ ಕಡೆಯ ಪರೀಕ್ಷೆಯಾಗಿದೆ. ಶತಾಯ ಗತಾಯ ಭೂಮಿ ನೀಡುವ ಪ್ರಶ್ನೆಯೇ ಇಲ್ಲ. ಕಾರ್ಪೋರೇಟ್ ಕಪಿ ಮುಷ್ಠಿಯಿಂದ ಹೊರಬಂದು ಜನಸೇವಕರಾಗಿ ಕೆಲಸ ಮಾಡಿ ಇಲ್ಲದಿದ್ದರೇ ಕೆ.ಎಚ್. ಮುನಿಯಪ್ಪ ಅವರನ್ನು ವಾಪಸ್ ಕೋಲಾರಕ್ಕೆ ಕಳುಹಿಸುತ್ತೇವೆ ಎಂದು ಹೇಳೀದರು.

ಮುಖಂಡರಾದ ಅಶ್ವತ್ಥಪ್ಪ, ನಂಜಪ್ಪ, ಮಂಜುನಾಥ್, ಸುಬ್ರಮಣಿ, ದೇವರಾಜು, ಮೋಹನ್, ಲಕ್ಷ್ಮಮ್ಮ, ಪ್ರಕಾಶ್, ನಾಗರಾಜ್, ಚೀಮಾಚನಹಳ್ಳಿ ರಮೇಶ್ ಇದ್ದರು.

**ಸಿಎಂ ಭೇಟಿಗೆ ಅವಕಾಶ ಕಲ್ಪಿಸಿ**

ಹೋರಾಟಕ್ಕಲ್ಲ ಈ ಹಿಂದೆ ಟ್ರ್ಯಕ್ಟರ್ ರ್ಯಾಲಿ ಮಾಡದಂತೆ ಜಿಲ್ಲಾಡಳಿತ ಮತ್ತು ಉಸ್ತುವಾರಿ ಸಚಿವರು ಮನವಿ ಮಾಡಿದ್ದರು. ಅವರ ಮಾತಿಗೆ ಗೌರವ ನೀಡಿ ರಾಲಿ ನಡೆಸಲಿಲ್ಲ ಈಗ ರೈತರು ಸಿಎಂ ಸಿದ್ದರಾಮಯ್ಯ ಅವರೊಂದಿಗೆ ಚರ್ಚಿಸಲು ಜಿಲ್ಲಾಡಳಿತವೇ ಅವಕಾಶ ಮಾಡಿಕೊಡಬೇಕು. ನಾವು ಮನವಿ ಮಾಡಿಕೊಳ್ಳುತ್ತೇವೆ ಹೊರತು ಹೋರಾಟ ಮಾಡುವುದಿಲ್ಲ ಎಂದು ಭೂ ಸ್ವಾಧೀನ ವಿರೋಧಿ ಹೋರಾಟ ಸಮಿತಿಯ ಸದಸ್ಯರು ಕೋರಿದರು.

ಒಂದು ವೇಳೆ ಇದು ಸಾಧ್ಯವಾಗದಿದ್ದರೆ ರೈತರನ್ನು ಬಂಧಿಸಿದರೂ ಲಾಠಿ ಚಾರ್ಜ್ ಮಾಡಿದರೂ ಹೆದರುವುದಿಲ್ಲ. ಸಿ.ಎಂ ಭೇಟಿಗೆ ಯತ್ನಿಸುತ್ತೇವೆ. ಹೀಗಾಗಿ ಅನ್ನದಾತರನ್ನು ಶಾಂತಿಯುತವಾಗಿ ನಡೆಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ಕೆಐಎಡಿಬಿ ಅಧಿಕಾರಿಗಳ ತೆರೆಮರೆ ಕೆಲಸ ಭೂಮಿ ಉಳಿಸಿಕೊಳ್ಳಲು ಸುದೀರ್ಘ ಹೋರಾಟ ಮಾಡುತ್ತಿದ್ದರೂ ಅದನ್ನು ಪರಿಗಣಿಸಿಸದೇ ವಿಶೇಷ ಭೂ ಸ್ವಾಧೀನ ಅಧಿಕಾರಿ ತೆರೆಮರೆಯಲ್ಲಿಯೇ ಭೂ ಸ್ವಾಧೀನಕ್ಕೆ ಅಗತ್ಯ ದಾಖಲೆಗಳನ್ನು ಸಿದ್ದಪಡಿಸಿಕೊಳ್ಳುತ್ತಿದ್ದಾರೆ. 13 ಹಳ್ಳಿಗಳ ಪೈಕಿ ಹ್ಯಾಡಾಳ ಗೋಕರೆ ಬಚ್ಚಹಳ್ಳಿ ಗ್ರಾಮದ ಕಡತವನ್ನು ತಾಲ್ಲೂಕು ಕಚೇರಿಯಿಂದ ವರ್ಗಾವಣೆ ಮಾಡುವಂತೆ ಒತ್ತಡ ತರುತ್ತಿದ್ದಾರೆ. ಸರ್ಕಾರ ಈ ವಿಚಾರದಲ್ಲಿ ಮೊಂಡುತನ ಪ್ರದರ್ಶಿಸಿದರೇ ಮುಂದಿನ ಸಾವು ನೋವುಗಳಿಗೆ ಕಾಂಗ್ರೆಸ್ ಸರ್ಕಾರವೇ ಹೊಣೆಯಾಲಿದೆ ಎಂದು ಪ್ರಮೋದ್ ಸದಸ್ಯರು ಎಚ್ಚರಿಕೆ ನೀಡಿರು.

## ವಿಜಯಪುರ: ಡಯಾಲಿಸಿಸ್ ಕೇಂದ್ರ ಸ್ಥಾಪನೆಗೆ ಒತ್ತಾಯ

ವಿಜಯಪುರ(ದೇವನಹಳ್ಳಿ): ಇಲ್ಲಿನ ಸಮುದಾಯ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸಿ, ಇಲ್ಲಿ ಆಧ್ಯತೆ ಮೇರೆಗೆ ಡಯಾಲಿಸೀಸ್ ಕೇಂದ್ರ ಸ್ಥಾಪಿಸಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

ಪಟ್ಟಣದಲ್ಲಿ 23 ವಾರ್ಡ್‌ಗಳಿಂದ 50 ಸಾವಿರಕ್ಕೂ ಹೆಚ್ಚು ಜನ ಇದ್ದಾರೆ. ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಹಳ್ಳಿಗಳಲ್ಲಿ ಮೂತ್ರಪಿಂಡಗಳ ವೈಫಲ್ಯಕ್ಕೆ ತುತ್ತಾಗಿರುವ ಬಹಳಷ್ಟು ಮಂದಿ ಇದ್ದು, ತಾಲ್ಲೂಕು ಆಸ್ಪತ್ರೆ ಹೋಗಬೇಕಿದೆ.

ರೋಗಿಗಳು ಬಸ್‌ಗಳಲ್ಲಿ ಪ್ರಯಾಣ ಮಾಡಲು ಸಾಧ್ಯವಾಗದೇ, ಆಟೊಗಳಿಗೆ ದುಬಾರಿ ಹಣ ಕೊಟ್ಟು ಹೋಗಿ ಡಯಾಲಿಸಿಸ್ ಮಾಡಿಸಿಕೊಂಡು ಬರಲು ಸಾಧ್ಯವಾಗದ ಅಸಹಾಯಕರು, ಮನೆಗಳಲ್ಲೆ ಉಳಿದು ಗಂಭೀರವಾದ ಪರಿಸ್ಥಿತಿಗೆ ಒಳಗಾಗುತ್ತಿದ್ದಾರೆ. ಸರ್ಕಾರ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಡಯಾಲಿಸಿಸ್ ಕೇಂದ್ರ ಆರಂಭಿಸಿದರೆ ಹೋಬಳಿಯಲ್ಲಿ ರೋಗಿಗಳಿಗೆ ಅನುಕೂಲ ಆಗಲಿದೆ ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ. ವಿಜಯಪುರದಿಂದ ದೇವನಹಳ್ಳಿ ತಾಲ್ಲೂಕು ಕೇಂದ್ರವು 10 ಕಿ.ಮೀ ದೂರದಲ್ಲಿದೆ. ಕಿಕ್ಕಿರಿದು ತುಂಬಿರುವ ಬಸ್‌ಗಳಲ್ಲಿ ಪ್ರಯಾಣಿಸಲು ಸಾಧ್ಯವಾಗುತ್ತಿಲ್ಲ. ಬಸ್ ನಿಲ್ದಾಣಕ್ಕೆ ನಡೆದುಕೊಂಡು ಹೋಗುವುದಕ್ಕೂ ಶಕ್ತಿಯಿಲ್ಲ. ಜೊತೆಯಲ್ಲಿ ಸಹಾಯಕ್ಕೆ ಬರುವುದಕ್ಕೆ ಯಾರೂ ಇರಲ್ಲ. ಒಂದು ದಿನ ಕೆಲಸ ಹೋಗುತ್ತದೆ ಎನ್ನುವ ಕಾರಣಕ್ಕೆ ಯಾರೂ ಬರಲ್ಲ. ಆಟೋದಲ್ಲಿ ಹೋಗಿ ಬರಲು ?800 ರೂಪಾಯಿ ಕೇಳುತ್ತಾರೆ. ಪಟ್ಟಣದ ಆಸ್ಪತ್ರೆಯಲ್ಲೆ ಡಯಾಲಿಸಿಸ್ ಕೇಂದ್ರವಿದ್ದರೆ, ಅನುಕೂಲವಾಗುತ್ತದೆ ಎನ್ನುತ್ತಾರೆ ರೋಗಿಯೊಬ್ಬರು. ತಾಲ್ಲೂಕು ಆಸ್ಪತ್ರೆಯಲ್ಲಿ ಡಯಾಲಿಸಿಸ್ ಕೇಂದ್ರವಿದೆ. ಯಂತ್ರೋಪಕರಣಗಳೂ ಇವೆ. ಪ್ರಸ್ತುತ ಡಯಾಲಿಸಿಸ್ ಮಾಡಿಕೊಡಲಾಗುತ್ತಿದೆ. ಸಮಯದಾಯ ಕೇಂದ್ರದಲ್ಲಿ ಡಯಾಲಿಸಿಸ್ ಕೇಂದ್ರ ಆರಂಭಿಸಬೇಕಾದರೆ ಆಸ್ಪತ್ರೆ ಮೇಲ್ದರ್ಜೆಗೇರಿಸಬೇಕು. ಪ್ರತ್ಯೇಕವಾದ ಕಟ್ಟಡಬೇಕು. ಪರಿಣಿತ ಸಿಬ್ಬಂದಿ ಕೊಡಬೇಕು. ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಿಕೊಡಬಹುದಷ್ಟೆ, ಸರ್ಕಾರ ಆದ್ಯತೆ ಮೇರೆಗೆ ಮಂಜೂರು ಮಾಡಿದರೆ ಮಾಡಬಹುದು ಎಂದು ಆರೋಗ್ಯ ಇಲಾಖೆಯ ಅಧಿಕಾರಿಯೊಬ್ಬರು ತಿಳಿಸಿದರು.

# ನೊಂದ ಮಾಸ್ತಿಹೊಳಿ ಗ್ರಾಮಸ್ಥರಿಗೆ ಪರಿಹಾರ ನೀಡದೆ ಸತಾಯಿಸುತ್ತಿರುವ ನೀರಾವರಿ ಇಲಾಖೆ ಅಧಿಕಾರಿಗಳು

ಬೆಳಗಾವಿ: ಜಿಲ್ಲೆ ಹುಕ್ಕೇರಿ. ತಾಲೂಕಿನ ಮಾಸ್ತಿಹೊಳಿ ಗ್ರಾಮದ ಸುಮಾರು 394 ಎಕರೆ 26 ಗುಂಟೆ ಜಮೀನನ್ನು ಭೂಸ್ವಾದಿನ ಪಡಿಸಿಕೊಂಡು ಪರಿಹಾರ ಧನ ನೀಡಲು ಈಗಾಗಲೇ ಸಾಕಷ್ಟು ಬಾರಿ ಮಾನ್ಯ ಜಿಲ್ಲಾಧಿಕಾರಿಗಳು ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಕಂದಾಯ ಅಧಿಕಾರಿಗಳು ನೀರಾವರಿ ಅಧಿಕಾರಿಗಳ ಸಹಯೋಗದೊಂದಿಗೆ ಚರ್ಚಿಸಲಾಗಿತ್ತು.

ಹೌದು ಮಾಸ್ತಿಹೊಳಿ ಗ್ರಾಮದ ಒಟ್ಟು ಕ್ಷೇತ್ರ 394 ಎಕರೆ 26 ಗುಂಟೆ, ದಿನಾಂಕ 05/12/2017 ರಿಂದ ಇಲ್ಲಿಯವರೆಗೆ ಒಟ್ಟು 15 ಬಾರಿ ಭೂಸ್ವಾಧೀನ ಪಡೆಸಿಕೊಳ್ಳಲು ಅರ್ಜಿ ಸಲ್ಲಿಸಿರುತ್ತಾರೆ.

ದಿನಾಂಕ27/08/2021 ರಂದು ಮಾನ್ಯ ನ್ಯಾಯಾಲಯವು ದಿನಾಂಕ27/03/2019 ರಂದು ನೀಡಿದ ವಿಶೇಷ ಭೂಸ್ವಾದಿನ ಅಧಿಕಾರಿಗಳು ನೀಡಿದ ವರದಿಯ ಮೇಲೆ ಕ್ರಮ ಕೈಗೊಳ್ಳಲು ಆದೇಶಿಸಿರುತ್ತದೆ.

ಇದಾದರೂ ಕೂಡ ನೀರಾವರಿ ಇಲಾಖೆಯವರು ಯಾವುದೇ ಕ್ರಮ ಕೈಗೊಳ್ಳುವುದೇ ಇರುವುದರಿಂದ ಭೂಮಿ ಕಳೆದುಕೊಂಡ ಸಂತ್ರಸ್ತರು ನ್ಯಾಯಾಂಗ ನಿಂದನೆ ಅರ್ಜಿಯನ್ನು ದಾಖಲು ಮಾಡಿರುತ್ತಾರೆ.

ಇದಾದ ನಂತರ ಭೂಸ್ವಾಧೀನ ಪಡಿಸಿಕೊಳ್ಳದೆ ಹಾಗೂ ಪರಿಹಾರ ಧನ ನೀಡದೆ ಮಾಸ್ತಿಹೊಳಿ ಗ್ರಾಮದ ಜಮೀನಿನ ಪಹನೆ ಪತ್ರಿಕೆಯಲ್ಲಿ ಏಕಾಏಕಿ ಕರ್ನಾಟಕ ನೀರಾವರಿ ನಿಗಮ ಅಂತ ದಾಖಲ ಮಾಡಿರುತ್ತಾರೆ.





ಇವೆಲ್ಲ ಅಂಶಗಳ ಮೇಲೆ ದಿನಾಂಕ21/12/2023 ರಂದು ಮಾನ್ಯ ಜಿಲ್ಲಾಧಿಕಾರಿಗಳ ಕಚೇರಿಗೆ ಮುತ್ತಿಗೆ ಹಾಕಿದ್ದಂಗೆ ನೀರಾವರಿ ಇಲಾಖೆಯ ಸಿಬ್ಬಂದಿಯವರು ಹಾಗೂ ವಿಶೇಷ ಭೂಸ್ವಾದಿನ ಅಧಿಕಾರಿಗಳು ಸಭೆ ಕರೆದು ಚರ್ಚಿಸಲಾಗಿ ದಿನಾಂಕ 28/02/2024 ರಂದು ಮತ್ತೊಮ್ಮೆ ಸಭೆ ಕರೆದು ಸಮಸ್ಯೆಯನ್ನು ಇತ್ಯಥ-'ಪಡಿಸಲು ನಿರ್ಧರಿಸಲಾಯಿತು. ಇದಾದ ನಂತರ ದಿನಾಂಕ 06/02/2024 ಅಸಮರ್ಪಕ ದಾಖಲೆಗಳನ್ನು ಲಗತಿಸಿ ಪ್ರತಿ ಅರ್ಜಿದಾರರಿಗೆ ನಿಮ್ಮ ಜಮೀನನ್ನು ಈ ಮೊದಲು ಭೂ ಸ್ವಾದಿನ ಪಡಿಸಿಕೊಳ್ಳಲಾಗಿದೆ ಅಂತ ತಿಳುವಳಿಕೆ ಪತ್ರ ನೀಡಿದ್ದು ಕಾರಣ ಭೂಮಾಲೀಕರು ರೊಚ್ಚಿಗೆದ್ದು ಅದೇ ದಿನ ಅಂದರೆ 06/02/2024 ರಂದು ಮುಖ್ಯ ಅಭಿಯಂತರರ ಕಚೇರಿಗೆ ಮುತ್ತಿಗೆ ಹಾಕಿದರು ಹಾಕಿದ ನಂತರ ಸದರಿ ತಿಳುವಳಿಕೆ ಪತ್ರವನ್ನು ಹಿಂದೆ ಪಡೆದು ದಿನಾಂಕ28/02/2024 ರಂದು ಭೂಷ್ವಾಧೀನ ಪ್ರಸ್ತಾವನೆಯನ್ನು ಸಲ್ಲಿಸುತ್ತೇವೆಂದು ಬರೆದು ಕೊಟ್ಟಿರುತ್ತಾರೆ. ಬೀರನಹೊಳಿ. ಸುತಗಟ್ಟಿ. ಇಸ್ಲಾಂಪುರ. ಗ್ರಾಮದ ಭೂಸ್ವಾಧೀನ ಪ್ರಸ್ತಾವನೆಗಳನ್ನು ಈ ಮೊದಲು ಮೇಲಾಧಿಕಾರಿಗಳ ಅನುಮತಿ ಇಲ್ಲದೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಅದಾಗಿಯೂ ಕೂಡ ನಮ್ಮ ಗ್ರಾಮಕ್ಕೆ ಸಂಬಂಧಪಟ್ಟ 394 ಎಕರೆ 26 ಗುಂಟೆ ಜಮೀನುಗಳಿಗೆ ಭೂಸ್ವಾದಿನ ಪ್ರಸ್ತಾವನೆ ಪ್ರಸ್ತಾವನೆಯನ್ನು ಸಲ್ಲಿಸಿ ಘಟನೆವಾಗಿ ವಿನಂತಿಸಲಾಗಿದೆ. ಕಾರಣ ನಮ್ಮ ಗ್ರಾಮದ 394 ಎಕರೆ 26 ಗುಂಟೆ ಜಮೀನಿನ ಭೂಸ್ವಾದಿನ ಪ್ರಸ್ತಾವನೆಯನ್ನು ನೀರಾವರಿ ಇಲಾಖೆಯವರು ಈ ಮೊದಲು ಬರೆದುಕೊಟ್ಟಂತೆ ದಿನಾಂಕ8/02/2024 ರೊಳಗೆ ಸಲ್ಲಿಸುತ್ತೇವೆಂದು ಲಿಖಿತ ಹೇಳಿಕೆ ನೀಡಿದ ಪ್ರಕಾರ ಸಲ್ಲಿಸಲು ಮತ್ತೊಮ್ಮೆ ವಿನಂತಿಸಲಾಗಿತ್ತು.

ಪತ್ರಿಕಾಗೋಷ್ಠಿಯಲ್ಲಿ ರೈತ ಮುಖಂಡರಾದ ಬಾಳೇಶ್. ಮಾವನೂರೀ, ನಿಂಗಪ್ಪ ಮಾವಿನ, ಸಂತೋಷ್ ಪಾಟೀಲ್, ನಿಂಗಪ್ಪ ಮಲ್ಲಪ್ಪ ಮಾವನೂರು, ನಿಂಗಪ್ಪ ಬಾಳಪ್ಪ ಗೋನಿ, ಬರಮ ಬಾಳಪ್ಪ ಕಮತಿ, ಸಂಜು ಸುತಾರ್, ಉಪಸ್ಥಿತರಿದ್ದರು.

ಅದು ಅಲ್ಲದೆ ದಿನಾಂಕ 6/02/ 2024 ರಂದು ಭೂಮಿ ಕಳೆದುಕೊಂಡ ಸಂತ್ರಸ್ತರು ಮುಖ್ಯ ಅಭಿಯಂತರರು ಕರ್ನಾಟಕ ನೀರಾವರಿ ನಿಗಮ ಉತ್ತರ ವಲಯ ಬೆಳಗಾವಿ ಇವರ ಕಚೇರಿಗೆ ಮುತ್ತಿಗೆ ಹಾಕಿದಾಗ ನೀರಾವರಿ ಅಧಿಕಾರಿಗಳು ದಿನಾಂಕ 28.2.2024 ರಂದು ಭೂಸ್ವಾಧೀನ ಪ್ರಸ್ತಾವನೆಯನ್ನು ಸಲ್ಲಿಸುತ್ತೇವೆಂದು ಲಿಖಿತ ಹೇಳಿಕೆ ನೀಡಿದ್ದರು.

ಅದಾದರೂ ಕೂಡ ಇಲ್ಲಿಯವರೆಗೂ ಪ್ರಸ್ತಾವನೆ ಸಲ್ಲಿಸಿರುವುದಿಲ್ಲ ಈಗ ಮಾಸ್ತಿಹೊಳಿ ಗ್ರಾಮದ ಭೂಮಿ ಕಳೆದುಕೊಂಡ ಸಂತ್ರಸ್ತರು ದಿನಾಂಕ 11/03/ 2024 ರಿಂದ ಅನಿರುದಿಷ್ಟ ಅವಧಿಯವರಿಗೆ ಜನ ಜಾನುವಾರು ಹಾಗೂ ಮಕ್ಕಳೊಂದಿಗೆ ಮುಖ್ಯ ಅಭಿಯಂತರರ ಕಚೇರಿಯ ಬೆಳಗಾವಿ ಸಿಎ ಆಫೀಸ್ ಎದುರು ಸತ್ಯಾಗ್ರ ಮಾಡಲು ನಿರ್ಧರಿಸಿದ್ದಾರೆ. ಒಂದು ವೇಳೆ ಮುಷ್ಕರದಲ್ಲಿ ಪ್ರಾಣ ಹಾನಿ ಇನ್ನಿತರೆ ಯಾವುದೇ ಅಹಿತಕರ ಘಟನೆ ಸಂಭವಿಸಿದಲ್ಲಿ ಎಂ. ಡಿ. ರಾಜೇಶ್. ಅಮೀನಬಾವಿ. ಧಾರವಾಡ. ಮುಖ್ಯ. ಅಭಿಯಂತರ. ಬಿ.ಆರ್. ರಾಠೋಡ್. ಕಾರ್ಯನಿರ್ವಾಹಕ ಅಭಿಯಂತರರು ರವಿಂದ್ರ ತಾಳೂರು ಎಸ್ ಎಂ ಮಡಿವಾಲೆ ಎಸ್ಆರ್ ಕಾಮತ್ ರೇಷ್ಮಾ ತಾಳಿಕೋಟಿ ಎಸ್ಎಲ್ಒ ಇವರ ಹೊಣೆಗಾರರಾಗುತ್ತಾರೆ ಎಂದರು.

## ಲೋಕಸಭೆ ಸಾರ್ವತ್ರಿಕ ಚುನಾವಣೆ; ಚುನಾವಣೆಗೆ ನಿಯೋಜನೆಗೊಳ್ಳುವ ಅಧಿಕಾರಿ, ಸಿಬ್ಬಂದಿಗಳೊಂದಿಗೆ ಡಿಸಿ ಸಭೆ

# ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಎಚ್ಚರವಹಿಸಿ: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್

ಬಳ್ಳಾರಿ: ಮುಂಬರುವ ಲೋಕಸಭಾ ಸಾರ್ವತ್ರಿಕ ಚುನಾವಣೆಯ ಕರ್ತವ್ಯದಲ್ಲಿ ನಿಯೋಜನೆಗೊಳ್ಳುವ ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿಗಳು ಚುನಾವಣೆ ಘೋಷಣೆಯಾಗುವ ದಿನದಿಂದಲೇ ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ನಿಗಾ ವಹಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಸಂಬಂಧ ಚುನಾವಣಾ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾ-ರಿಗೊಳಿಸಲು ಹಾಗೂ ಚುನಾವಣಾ ವೆಚ್ಚ ಹಾಗೂ ಇತರೆ ವಿಷಯಗಳ ಕುರಿತು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಏರ್ಪಡಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚುನಾವಣೆ ಘೋಷಣೆಯಾದ ನಂತರ 24, 48 ಹಾಗೂ 72 ಗಂಟೆಗಳಲ್ಲಿ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಮೂರು ವಿವಿಧ ಭಾಗಗಳಲ್ಲಿ ಕ್ರಮಗಳನ್ನು ಕೈಗೊಳ್ಳಬೇಕಾಗುತ್ತದೆ ಎಂದು ಎಆರ್‌ಓ, ಎಇಆರ್‌ಓ, ಬಿಎಲ್‌ಓಗಳಿಗೆ ತಿಳಿಸಿದರು.

ಮೊದಲ ಹಂತದಲ್ಲಿ 24 ಗಂಟೆಯೊಳಗೆ ಸರ್ಕಾರದ ಜಾಹೀರಾತುಗಳು, ಎರಡನೇ ಹಂತದಲ್ಲಿ 48 ಗಂಟೆಯೊಳಗೆ ಸರ್ಕಾರಿ ಸ್ವಾಮ್ಯದ ನಿಗಮ ಮಂಡಳಿಗಳು ಹಾಗೂ ಮೂರನೇ ಹಂತದಲ್ಲಿ 72 ಗಂಟೆಯೊಳಗೆ ಖಾಸಗಿ ವಲಯದಲ್ಲಿ ನೀತಿ ಸಂಹಿತೆಗೆ ವಿರುದ್ಧವಾದ ಜಾಹೀರಾತುಗಳನ್ನು ತೆಗೆಯಬೇಕಾಗುತ್ತದೆ. ಇದಕ್ಕೆ ಸಂಬಂಧಿಸಿದಂತೆ ಗ್ರಾಪಂ, ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ, ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು ಎಂದು ಸೂಚಿಸಿದರು.

ಚುನಾವಣೆ ಘೋಷಣೆಯಾದ ತಕ್ಷಣ ಜಿಲ್ಲೆಯಲ್ಲಿ ರಾಜಕೀಯ ಪಕ್ಷಗಳ ಬ್ಯಾನರ್, ಫ್ಲೆಕ್ಸ್, ಉದ್ಘಾಟನೆಗೊಂಡ ಕಾಮಗಾ-ರಿಗಳ ಫಲಕಗಳು, ಗ್ರಾಮ – ನಗರಗಳ ಸ್ವಾಗತ ಕಮಾನುಗಳು ಹಾಗೂ ಕೊಡುಗೆ ನೀಡಿದ ವಸ್ತುಗಳ ಮೇಲೆ ರಾಜಕೀಯ ವ್ಯಕ್ತಿಗಳ ಹಾಗೂ ಜನಪ್ರತಿನಿಧಿಗಳ ಭಾವಚಿತ್ರ



ತೆರವುಗೊಳಿಸುವಂತೆ ಕ್ರಮ ವಹಿಸಬೇಕು ಎಂದು ಸಂಬಂಧ ಪಟ್ಟ ಅಧಿಕಾರಿಗಳಿಗೆ ತಿಳಿಸಿದರು.

ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಯಾದರೆ, ಎಂಸಿಸಿ ತಂಡಗಳು ಉಲ್ಲಂಘನೆ ಆಗದಂತೆ ಎಚ್ಚರ ವಹಿಸಬೇಕು. ಸಹಾಯಕ ವೆಚ್ಚ ವೀಕ್ಷಕರು, ಫ್ಲೈಯಿಂಗ್ ಸ್ಕ್ವಾಡ್ಗಳು, ವೀಡಿಯೋ ಸರ್ವೆಲನ್ಸ್, ವೀಡಿಯೋ ವಿವ್ಹಿಂಗ್ ತಂಡಗಳು, ಸ್ಟ್ಯಾಟಿ-ಕ್ ಸರ್ವೆಲನ್ಸ್ ತಂಡಗಳು ಜಾಗೃತರಾಗಿ ಕಾರ್ಯನಿರ್ವಹಿಸಬೇಕು ಎಂದರು.

ಈಗಾಗಲೇ ಗಡಿಜಿಲ್ಲೆ ಭಾಗದಲ್ಲಿ ಚೆಕ್ ಪೇಸ್ಟ್ಗಳು ಕಾರ್ಯಪ್ರವೃತ್ತವಾಗಿವೆ. ಎಫ್‌ಎಸ್, ಎಸ್‌ಎಸ್ಟಿ, ವಿಎಸ್ಟಿ, ವಿವಿಟಿ ತಂಡ ಹಾಗೂ ಪೊಲೀಸ್ ಸೆಕ್ಟರ್‌ಗಳಿಗೆ ನಿಯೋಜನೆಗೊಳ್ಳುವ ಅಧಿಕಾರಿಗಳು ಚುನಾವಣಾ ವಿಷಯಗಳನ್ನು ಗಂಭೀರವಾಗಿ ಪರಿಗಣಿಸಬೇಕು. ಚುನಾವಣಾ ಆಯೋಗದ ನಿರ್ದೇಶನಗಳನ್ನು ತಿಳಿದುಕೊಂಡು ತಮ್ಮ ಕರ್ತವ್ಯಗಳನ್ನು ಅಚ್ಚುಕಟ್ಟಾಗಿ ಪಾಲಿಸಬೇಕು ಎಂದರು.

ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಯನ್ವಯ ತಮ್ಮ ತಮ್ಮ ಜವಾಬ್ದಾರಿಗಳನ್ನು ಪ್ರಾಮಾಣಿಕವಾಗಿ ನಿರ್ವಹಿಸಬೇಕಿದೆ. ಚುನಾವಣೆ ಕರ್ತವ್ಯವನ್ನು ನಿಷ್ಪಕ್ಷ ಹಾಗೂ ನ್ಯಾಯ ಸಮ್ಮತವಾಗಿ ನಡೆಸುವ ಹಿನ್ನೆಲೆಯಲ್ಲಿ ನಿಯೋಜನೆಗೊಂಡ ಎಲ್ಲ ತಂಡಗಳೂ ಹೆಚ್ಚು ಗಮನ ವಹಿಸಬೇಕು ಎಂದು ತಿಳಿಸಿದರು.

ಸಹಾಯಕ ಚುನಾವಣಾಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವ ತಂಡಗಳ ಅಧಿಕಾರಿಗಳಿಗೆ ಸೂಕ್ತ ತರಬೇತಿ ಮತ್ತು ಮಾರ್ಗದರ್ಶನ ನೀಡಬೇಕು. ಮಸ್ಟರಿಂಗ್, ಡಿ- ಮಸ್ಟರಿಂಗ್ ಕೇಂದ್ರ, ಎಣಿಕೆ ಕೇಂದ್ರ, ಪೇಸ್ಟಲ್ ಬ್ಯಾಲೆಟ್, ಇ-ಎಸ್‌ಎಂಎಸ್, ಸಿ-ವಿಜಿಲ್, ಸುವಿಧಾ ಸೇರಿದಂತೆ ಅಗತ್ಯ ತರಬೇತಿ ಹೊಂದಬೇಕು ಎಂದರು.

ಜಿಲ್ಲೆಯಲ್ಲಿ ಗುರುತಿಸಲಾಗಿರುವ ಮತಗಟ್ಟೆಗಳಲ್ಲಿ ಕುಡಿಯುವ ನೀರು, ಬೆಳಕಿನ ವ್ಯವಸ್ಥೆ, ಶೌಚಾಲಯ, ಮತಗಟ್ಟೆಗಳ ದುರಸ್ಥಿ ಸಂಬಂಧಿದಂತೆ ಪರಿಶೀಲನೆ ನಡೆಸಬೇಕು. ಹೊಸ ಮತಗಟ್ಟೆ ಕೇಂದ್ರಗಳ ಅವಶ್ಯಕತೆ ಇದ್ದಲ್ಲಿ ಮಾಹಿತಿ ನೀಡಬೇಕು. ಸಂಬಂಧಿಸಿದ ಅಧಿಕಾರಿಗಳು ಮತಗಟ್ಟೆ ಕೇಂದ್ರಗಳಲ್ಲಿ ಯಾವುದೇ ರೀತಿಯ ಕೊರತೆಯಾಗದಂತೆ ಮೂಲಸೌಕರ್ಯ ಕಲ್ಪಿಸಬೇಕು ಎಂದು ಅವರು ತಿಳಿಸಿದರು.

ಜಿಲ್ಲಾ ಸ್ವೀಪ್ ಸಮಿತಿಯ ನೋಡೆಲ್ ಅಧಿಕಾರಿ ಹಾಗೂ ಜಿಪಂ ಸಿಇಒ ರಾಹುಲ್ ಶರಣಪ್ಪ ಸಂಕನೂರ ಅವರು ಮಾತನಾಡಿ, ಚುನಾವಣೆ ಕರ್ತವ್ಯಗಳನ್ನು ತಂಡವಾಗಿ ಹೊಣೆಗಾರಿಕೆಯಿಂದ ಕೆಲಸ ನಿರ್ವಹಿಸಿದರೆ ಯಶಸ್ವಿಯಾಗಲು ಸಾಧ್ಯವಾಗಲಿದೆ. ಹಾಗಾಗಿ ಪ್ರತಿಯೊಬ್ಬರೂ ನಿಯೋಜಿಸಿದ ಕರ್ತವ್ಯವನ್ನು ಯಾವುದೇ ಲೋಪ ಇಲ್ಲದೆ ನಿರ್ವಹಿಸಬೇಕು ಎಂದು ಸೂಚಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಅವರು ಮಾತನಾಡಿ, ಸೂಕ್ಷ್ಮ ಮತಗಟ್ಟೆ ಕೇಂದ್ರಗಳ ಬಗ್ಗೆ ನಿಗಾವಹಿಸಬೇಕು. ಯಾವುದೇ ಅಹಿತಕರ ಘಟನೆಗಳಿಗೆ ಆಸ್ಪದ ನೀಡಬಾರದು. ಸಮಸ್ಯೆ ಕಂಡುಬಂದಲ್ಲಿ ಪೊಲೀಸ್ ಅಧಿಕಾರಿಗಳ ಗಮನಕ್ಕೆ ತರಬೇಕು ಎಂದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್, ಸಹಾಯಕ ಆಯುಕ್ತರಾದ ಹೇಮಂತ್, ಚುನಾವಣಾ ತರಬೇತುದಾರ ರುದ್ರೇಶ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ತಹಶೀಲ್ದಾರರು ಹಾಗೂ ತಾಪಂ ಇಒ ಗಳು ಉಪಸ್ಥಿತರಿದ್ದರು.

# ಮಾ.11 ರಂದು ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಸಮಾವೇಶ

## ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕರೆ: ಡಿಸಿ ಪ್ರಶಾಂತ್ ಕುಮಾರ್

ಬಳ್ಳಾರಿ: ಜಿಲ್ಲೆಯಲ್ಲಿ ಸರ್ಕಾರದ ಪ್ರಮುಖ, ಜನಪ್ರಿಯ ಯೋಜನೆಗಳ ಕುರಿತು ಜಾಗೃತಿ ಮೂಡಿಸಲು ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಮಾರ್ಚ್ 11 ರಂದು ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಸಮಾವೇಶ ಹಮ್ಮಿಕೊಳ್ಳಲಾಗುತ್ತಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಕರೆ ನೀಡಿದರು.

ಶನಿವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಸಮಾವೇಶ ಹಮ್ಮಿಕೊಳ್ಳುವ ಕುರಿತು ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಸಮಾವೇಶದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಫಲಾನುಭವಿಗಳನ್ನು ಸೇರಿಸಲು ಪ್ರತಿ



ತಾಲೂಕಿನಿಂದ ಫಲಾನುಭವಿಗಳನ್ನು ಸಮಾವೇಶಕ್ಕೆ ಕರೆ ತರಲು ಬಸ್ ವ್ಯವಸ್ಥೆ ಕಲ್ಪಿಸುವಂತೆ ತಹಶೀಲ್ದಾರರಿಗೆ ಹೇಳಿದರು.

ಸರ್ಕಾರದ ನಿರ್ದೇಶನದ ಮೇರೆಗೆ ಗ್ಯಾರಂಟಿ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಲು ಸಮಾವೇಶವನ್ನು ಆಯೋಜಿಸಲಾಗುತ್ತಿದೆ. ಕಾರ್ಯಕ್ರಮದಲ್ಲಿ ಭಾಗವಹಿಸುವ ಫಲಾನುಭವಿಗಳಿಗೆ ಬಸ್ಗಳ ವ್ಯವಸ್ಥೆ ಮಾಡಲಾಗುವುದೆಂದು ತಿಳಿಸಿದರು.

ಸರ್ಕಾರದ ಗ್ಯಾರಂಟಿ ಯೋಜನೆಗಳು, ಇತರೆ ಅಭಿವೃದ್ಧಿ ಕಾಮಗಾರಿಗಳ ಕುರಿತ ಜನರಲ್ಲಿ ಜಾಗೃತಿ ಮೂಡಿಸಲು ಗ್ಯಾರಂಟಿ ಸಮಾವೇಶವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವ-ರಿಷ್ಠಾಧಿಕಾರಿ ರಂಜೀತ್ ಕುಮಾರ್ ಬಂಡಾರು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್, ಸಹಾಯಕ ಆಯುಕ್ತರಾದ ಹೇಮಂತ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ತಹಶೀಲ್ದಾರರು ಹಾಗೂ ತಾಪಂ ಇಒ ಗಳು ಉಪಸ್ಥಿತರಿದ್ದರು.

## 5 ವರ್ಷದಿಂದ ಹಸಿ ತರಕಾರಿ ಸೇವಿಸಿದ ವ್ಯಕ್ತಿ ಆರೋಗ್ಯ: ಬಿಪಿ, ಶುಗರ್, ಕಿಡ್ನಿ ಸಮಸ್ಯೆ ಎಲ್ಲವೂ ನಾರ್ಮಲ್ ಎಂದ ಧಾರವಾಡ ನಿವಾಸಿ

ಧಾರವಾಡ: ಹೊಟ್ಟೆಗೆ ಅನ್ನ ತಿನ್ನೋ ವುದು ಸರ್ವೇ ಸಾಮಾನ್ಯ, ಆದ್ರೆ ಇಲ್ಲೊಬ್ಬ ವ್ಯಕ್ತಿ ಕಳೆದ 5 ವರ್ಷಗಳಿಂದ ಅನ್ನವನ್ನೇ ತಿಂದಿಲ್ಲ. ಅಷ್ಟೇ ಅಲ್ಲ ಬೇಯಿಸಿದ ಇಡ್ಲಿ, ಚಪಾತಿ, ರೊಟ್ಟಿ ಏನೂ ತಿಂದಿಲ್ಲ. ಈತನ ಆಹಾರ ತರಕಾರಿ, ಸೊಪ್ಪು ಅಷ್ಟೇ ತಿಂದು ಆರೋಗ್ಯದೆಡೆ ಸಾಗಿದ್ದಾರೆ.



ಶಿವಾನಂದ ಬಳ್ಳೂರ. ಧಾರವಾಡದ ಹೆಬ್ಬಳ್ಳಿ ಅಗಸಿ ನಿವಾಸಿಯಾದ ಇವರಿಗೆ ಈಗ 34 ವರ್ಷ. ಶಿವಾನಂದ ಬಳ್ಳೂರ ಹಸಿ ತರಕಾರಿಗಳನ್ನೇ ತಿಂದು ಕಳೆದ 5 ವರ್ಷಗಳಿಂದ ಜೀವಿಸ್ತಿದ್ದಾರೆ. ಹಸಿ ಹೀರೇಕಾಯಿ, ಹಸಿ ಆಲೂಗಡ್ಡೆ, ಕೊಬ್ಬರಿ, ಮೆಣಸಿನಕಾಯಿ ಸೇರಿ ಕೆಲ ತರಕಾರಿಗಳನ್ನ ಬೇಯಿಸದೇ ತಿನ್ನುತ್ತಾರೆ. ಶಿವಾನಂದಗೆ 29 ವರ್ಷ ವಯಸ್ಸಿದ್ದಾಗಲೇ ಬಿಪಿ, ಸಕ್ಕರೆ ಕಾಯಿಲೆ, ಥೈರಾಯ್ಡ್, ಕಿಡ್ನಿ ಸಮಸ್ಯೆ ಕಾಡ್ತಿತ್ತಂತೆ. ಎಲ್ಲ ವೈದ್ಯರನ್ನೂ ಭೇಟಿ ಮಾಡಿ ಚಿಕಿತ್ಸೆ ಪಡೆದರೂ ದೂರವಾಗಿರಲಿಲ್ಲ. ಹೀಗಾಗಿ ನಾನ್ವೆಜ್, ಬೇಯಿಸಿದ ಆಹಾರ ನಿಲ್ಲಿಸಿ ಹಸಿ ತರಕಾರಿ ತಿನ್ನೋಕೆ ಶುರುಮಾಡಿದ್ರು. ಬೆಳಿಗ್ಗೆ ಎದ್ದ ತಕ್ಷಣ ಬೇವಿನ ಸೊಪ್ಪು, ವಿವಿಧ ಹಣ್ಣು, ಮಧ್ಯಾಹ್ನ ವಿವಿಧ ಹಸಿ ತರಕಾರಿ, ರಾತ್ರಿ ಮತ್ತೆ ಹಸಿ ತರಕಾರಿಗಳನ್ನೇ ಸೇವಿಸ್ತಾರೆ.

ಹಸಿ ತರಕಾರಿ, ಬೇವಿನ ಸೊಪ್ಪು, ಇತ್ಯಾದಿ ಔಷಧಿ ಗುಣಗಳುಳ್ಳ ಸೊಪ್ಪನ್ನೇ ಆಹಾರ ಮಾಡಿಕೊಂಡಿರೋ ಶಿವಾನಂದ್ಗೆ ಸದ್ಯ ಅನಾರೋಗ್ಯ ಸಮಸ್ಯೆ ಕಡಿಮೆಯಾಗಿವೆ. ಇದು ಹೇಗ್ ಸಾಧ್ಯ ಅಂತಾ ಶಿವಾನಂದಗೆ ಪ್ರಶ್ನಿಸಿದ್ರೆ, ಕಾಡಲ್ಲಿರೋ ಸಸ್ಯಾಹಾರಿ ಪ್ರಾಣಿ ಇದೇ ರೀತಿ ಜೀವಿಸ್ತಾವಲ್ಲ ಅಂತಾ ಉತ್ತರಿಸ್ತಾರೆ.

ಈಗ ವೈದ್ಯರು ಪರೀಕ್ಷಿಸಿದರೆ ಎಲ್ಲ ರಿಪೋರ್ಟ್ ನಾರ್ಮಲ್ ಇದೆ. ಮೊದಲು 20 ಕಿಲೋ ಮೀಟರ್ ನಡೆದರೆ ಆಯಾಸವಾಗುತ್ತಿತ್ತು. ಆದರೆ ಈಗ 20 ಕಿಲೋ ಮೀಟರ್ ನಡೆದರೆ ಯಾವುದೇ ಆಯಾಸ ಆಗಲ್ಲ. ಇದು ಎಲ್ಲರಿಗೂ ದೇವರ ಆಹಾರ, ಎಲ್ಲದಕ್ಕೂ ಪರಿಹಾರ. ಇಂತಹ ತರಕಾರಿಗಳನ್ನು ತಿಂದರೆ ಯಾವುದೇ ರೋಗ ಇರುವುದಿಲ್ಲ.

ಪವಿತ್ರಾ ಬಳ್ಳೂರ, ಶಿವಾನಂದ ಪತ್ನಿ ಸದ್ಯ ಯಾವುದೇ ಆರೋಗ್ಯ ಸಮಸ್ಯೆ ಇಲ್ಲದೇ ಶಿವಾನಂದ ಉಲ್ಲಾಸದಿಂದ ಇದ್ದು, ಇದೇ ರೀತಿಯ ಆಹಾರ ಪದ್ಧತಿ ಮುಂದುವರಿಸಲು ನಿರ್ಧರಿಸಿದ್ದಾರೆ. 5 ವರ್ಷಗಳಿಂದ ಕಠಿಣ ತಪಸ್ಸಿನಂತೆ ಈ ಆಹಾರ ಪದ್ಧತಿ ಅಳವಡಿಸಿಕೊಂಡು ಜೀವನ ನಡೆಸ್ತಿರೋದೇ ರೋಚಕ.

# ನೇತ್ರದಾನ: ಮಾನವೀಯತೆ ಮೆರೆದ ಕುಟುಂಬ ಸದಸ್ಯರು



ಬಳ್ಳಾರಿ: ಅಕಾಲಿಕ ನಿಧನ ಹೊಂದಿದ ಸಿರುಗುಪ್ಪ ತಾಲೂಕಿನ ಭೈರಾಪೂರ ಗ್ರಾಮದ ಮಾರುತಿ ಶೆಟ್ಟಿ.ಬಿ ಅವರ ನೇತ್ರಗಳನ್ನು ದಾನ ಮಾಡಿ, ಕುಟುಂಬದ ಸದಸ್ಯರು ಮಾನವೀಯತೆ ಮೆರೆದರು.

ಅನಾರೋಗ್ಯದ ಹಿನ್ನಲೆಯಲ್ಲಿ ಚಿಕಿತ್ಸೆಗೆಂದು ಬಳ್ಳಾರಿಯ ಆದರ್ಶ ಹಾರ್ಟ್ಕೇರ್ ಸೆಂಟರ್, ಖಾಸಗಿ ಆಸ್ಪತ್ರೆಯಲ್ಲಿ ದಾಖಲಾಗಿದ್ದ 68 ನೇ ವಯಸ್ಸಿನ ಮಾರುತಿ ಶೆಟ್ಟಿ ತಂದೆ ನಾರಾಯಣ ಶೆಟ್ಟಿ ಅವರು, ಚಿಕಿತ್ಸೆ ಫಲಕಾರಿಯಾಗದೆ ಮಾ.08 ರಂದು ಮರಣ ಹೊಂದಿದ್ದರು.

ಅನ್ಯಕಾರ್ಯ ನಿಮಿತ್ಯ ಆಸ್ಪತ್ರೆಗೆ ತೆರಳಿದ್ದ ಸಮುದಾಯ ಆರೋಗ್ಯ ಅಧಿಕಾರಿ ಸಂತೋಷ್ ಕುಟುಂಬದ ಸದಸ್ಯರಿಗೆ ಮರಣಾನಂತರ ಇತರರ ಬಾಳಿಗೆ ಬೆಳಕಾಗುವ ಅವಕಾಶ ಹಿನ್ನಲೆಯಲ್ಲಿ ನೇತ್ರದಾನವನ್ನು ಮಾಡುವ ಕುರಿತು ಮಹತ್ವ ತಿಳಿಸಿದ ನಂತರ ಮಗನಾದ ಪ್ರದೀಪ್ ಅವರು ಒಪ್ಪಿಗೆ ಸೂಚಿಸಿದ ತಕ್ಷಣ ವಿಮ್ಸ್ ನೇತ್ರಬಂಡಾರಕ್ಕೆ ಸಂಪರ್ಕಿಸಲಾಗಿದೆ.

ವಿಮ್ಸ್ ನೇತ್ರತಜ್ಞರಾದ ಡಾ.ಪರಸಪ್ಪ ಅವರು ತಕ್ಷಣ ಡಾ.ಅನುಷಾ ನೇತೃತ್ವದಲ್ಲಿ ತಂಡವನ್ನು ಕಳುಹಿಸಿ ಆದರ್ಶ ಆಸ್ಪತ್ರೆಯ ವ್ಯವಸ್ಥಾಪಕರಾದ ಪಲ್ಲೇದ ಬಸವರಾಜ, ಹಾಗೂ ಡಾ.ಕೋಟ್ರೇಶ್ ಅವರ ಸಹಕಾರದೊಂದಿಗೆ ಕಣ್ಣಿನ ಮಸೂರ (ಕಾರ್ನಿಯಾ) ವನ್ನು ಪಡೆದುಕೊಂಡಿದ್ದಾರೆ.

ನೋವಿನಲ್ಲೂ ಕಣ್ಣಿನ ದಾನ ಮಾಡಿದ ಕುಟುಂಬದ ಸದಸ್ಯರನ್ನು ದೂರವಾಣಿ ಮೂಲಕ ಸಂಪರ್ಕಿಸಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ವೈ ರಮೇಶಬಾಬು ಅವರು ಸಾಂತ್ವನ ನುಡಿಗಳನ್ನು ಹೇಳಿದ್ದಾರೆ.

ಪ್ರಸ್ತುತ ದೇಶದಲ್ಲಿ ಅಂಗಾಂಗ ದಾನ ನೋಂದಣಿ ಅಭಿಯಾನ ನಡೆಯುತ್ತಿದ್ದು, ಬಳ್ಳಾರಿ ಜಿಲ್ಲೆ, 4378 ಜನರ ನೋಂದಣಿ ಮಾಡಿಸಿ ಮೊದಲ ಸ್ಥಾನದಲ್ಲಿದೆ ಎಂದು ತಿಳಿಸಿದ ಅವರು, ನಮ್ಮ ದೇಹದ ಕಣ್ಣು, ಹೃದಯ, ಲೀವರ್, ಶ್ವಾಸಕೋಶ, ಪಿತ್ತಜನಕಾಂಗ ಕಿಡ್ನಿ, ಚರ್ಮ ಮುಂತಾದವುಗಳನ್ನು ದಾನ ಮಾಡಬಹುದಾಗಿದೆ. ಇನ್ನೊಬ್ಬರ ಬಾಳಿಗೆ ಬೆಳಕಾಗಿ ಜೀವ ಸಾರ್ಥಕತೆಗೆ ಪಡೆದ ಕುಟುಂಬದ ಸದಸ್ಯರ ತೀರ್ಮಾನ ಇತರರಿಗೂ ಸ್ಫೂರ್ತಿಯಾಗಿದ್ದಾರೆ ಎಂದು ಡಾ.ವೈ.ರಮೇಶ್ ಬಾಬು ಅವರು ಹೇಳಿದರು.

'ಪ್ರತಿದಿನ ಹಲವಾರು ಕಾರಣಗಳಿಂದ ಕಣ್ಣಿನ ದೃಷ್ಟಿ ಕಳೆದುಕೊಂಡು ಕಣ್ಣುಗಳ ಜೋಡಣೆಗಾಗಿ 60 ಜನ ಬೇಡಿಕೆಯ ನೋಂದಣಿ ಮಾಡಿಸುತ್ತಿದ್ದಾರೆ. ಪ್ರತಿ ತಿಂಗಳು ನೇತ್ರ ಬಂಡಾರಕ್ಕೆ 4 ರಿಂದ 5 ನೇತ್ರದಾನವಾಗುತ್ತಿದ್ದು, ನೋಂದಣಿ ಮಾಡಿಸಿದವ-ರಿಗೆ ಜೋಡಿಸಲಾಗುತ್ತಿದೆ. ಮುಖ್ಯವಾಗಿ ವಯಸ್ಕರು ಮರಣ ಹೊಂದಿದ ಸಂದರ್ಭದಲ್ಲಿ ನೇತ್ರದಾನ ಮಾಡಲು ಮುಂದೆ ಬರಬೇಕು' ಎಂದು ವಿಮ್ಸ್ ನೇತ್ರತಜ್ಞ ಡಾ.ಪರಸಪ್ಪ ಅವರು ವಿನಂತಿಸಿದ್ದಾರೆ.

# ಅನಾಮಧೇಯ ಮೃತ ವಾರಸುದಾರರ ಪತ್ತೆಗೆ ಮನವಿ

ಬಳ್ಳಾರಿ: ಬಳ್ಳಾರಿ ಮತ್ತು ಹದ್ದಿನಗುಂಡು ರೈಲು ನಿಲ್ದಾಣ ಮಧ್ಯದ ರೈಲ್ವೇ ಕಿ.ಮೀ ನಂ.210/3-4 ಡೌನ್ ರೈಲು ಹಳಿಯ ಮಧ್ಯೆಯಲ್ಲಿ ಸುಮಾರು 30 ವರ್ಷದ ಅನಾಮಧೇಯ ವ್ಯಕ್ತಿಯು ಮಾ.07 ರಂದು ಸಾವನ್ನಪ್ಪಿದ್ದು, ಮೃತ ವಾರಸುದಾರರ ಪತ್ತೆಗಾಗಿ ಬಳ್ಳಾರಿ ರೈಲ್ವೇ ಪೊಲೀಸ್ ಠಾಣೆಯು ಪ್ರಕಟಣೆ ಹೊರಡಿಸಿದೆ.

ಮೃತನ ಚಹರೆ ಗುರುತು:

ಸುಮಾರು 5.4 ಅಡಿ ಎತ್ತರ, ಕೋಲುಮುಖ, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ, ಉದ್ದನೇಯ ಮೂಗು, ತಲೆಯಲ್ಲಿ ಸುಮಾರು 2 ಇಂಚು ಕಪ್ಪು ಕೂದಲು ಹಾಗೂ ಸಣ್ಣ ಗಡ್ಡ, ಮೀಸೆ ಬಿಟ್ಟಿರುತ್ತಾನೆ.

ಮೃತನ ಮೈಮೇಲಿನ ಬಟ್ಟೆಗಳು:

ತಿಳಿ ನೀಲಿ ಬಣ್ಣದ ರೌಂಡ್ ನೆಕ್ ಟಿ-ಶರ್ಟ, ಕಪ್ಪು ಬಣ್ಣದ ಬನಿಯನ್, ತಿಳಿ ನೀಲಿ ಬಣ್ಣದ ಆಫ್ ಚಡ್ಡಿ, ಕನ್ನಡಕ, ವಿಕೆಸಿ ಕಂಪನಿಯ ಕಪ್ಪು ಬಣ್ಣದ ಚಪ್ಪಲಿ ಧರಿಸಿರುತ್ತಾನೆ.

ಮೃತನ ವಾರಸುದಾರರ ಬಗ್ಗೆ ಸುಳಿವು ಸಿಕ್ಕಲ್ಲಿ ಬಳ್ಳಾರಿ ರೈಲ್ವೇ ಪೊಲೀಸ್ ಠಾಣೆಯ ಪೊಲೀಸ್ ಉಪನಿರೀಕ್ಷಕರ ಮೊ.94808021231 ಮತ್ತು ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ಪೊಲೀಸ್ ವೃತ್ತ ನಿರೀಕ್ಷಕರ ದೂ.9480800471 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ವಿದ್ಯಾರ್ಥಿನಿ ಅನುಮಾನಾಸ್ಪದ ಸಾವು

ಕಲಬುರಗಿ:ಬಾಲಕಿಯರ ಹಾಸ್ಟಲ್ನಲ್ಲಿ 10ನೇ ತರಗತಿ ವಿದ್ಯಾರ್ಥಿನಿ ಓರ್ವಳ ಶವ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದೆ. ಈ ಘಟನೆ ಚಿತ್ತಾಪುರ ತಾಲೂಕಿನ ಕರದಾಳ ಗ್ರಾಮದ ವಸತಿ ಶಾಲೆಯಲ್ಲಿ ನಡೆದಿದೆ. ಚಿತ್ತಾಪುರ ತಾಲೂಕಿನ ಗ್ರಾಮವೊಂದರ ಎಸ್‌ಎಸ್-ಎಲ್ಸಿ ಓದುತ್ತಿರುವ ವಿದ್ಯಾರ್ಥಿನಿ ಹಾಸ್ಟೆಲ್ನಲ್ಲಿ ಇದ್ದುಕೊಂಡು ಶಾಲೆಗೆ ಹೋಗುತ್ತಿದ್ದಳು. ಆದರೆ ಹಾಸ್ಟೆಲ್ನಲ್ಲಿ ನೇಣುಬಿಗಿದುಕೊಂಡ ಸ್ಥಿತಿಯಲ್ಲಿ ವಿದ್ಯಾರ್ಥಿನಿ ಶವ ಪತ್ತೆ ಆಗಿರುವುದು ಹಲವು ಅನುಮಾನಗಳನ್ನ ಹುಟ್ಟು ಹಾಕಿದೆ. ಆತ್ಮಹತ್ಯೆಗೆ ನಿಖರವಾದ ಕಾರಣ ತಿಳಿದು ಬಂದಿಲ್ಲ.

# ಶೈಕ್ಷಣಿಕ ಕಾರ್ಯಗಳಿಗೆ ಒತ್ತು: ಸಚಿವ ಸತೀಶ ಜಾರಕಿಹೊಳಿ

## ಶ್ರೀ ದುರದುಂಡೇಶ್ವರ ವಿರಕ್ತಮಠದ ನೂತನ ವ್ಯಾಪಾರ ಮಳಿಗೆ ಉದ್ಘಾಟಿಸಿದ ಸಚಿವ ಸತೀಶ ಜಾರಕಿಹೊಳಿ



ಬೆಳಗಾವಿ: ತಾಲೂಕಿನ ಕಡೋಲಿ ಗ್ರಾಮದಲ್ಲಿರುವ ಶ್ರೀ ದುರದುಂಡೇಶ್ವರ ವಿರಕ್ತಮಠಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಭೇಟಿ ನೀಡಿ, ನೂತನವಾಗಿ ನಿರ್ಮಾಣಗೊಂಡ ವ್ಯಾಪಾರ ಮಳಿಗೆಗಳನ್ನು ಉದ್ಘಾಟಿಸಿದರು.

ಈ ವೇಳೆ ಸಚಿವ ಸತೀಶ ಜಾರಕಿಹೊಳಿ ಅವರು ಮಾತನಾಡಿ, ಪ್ರತಿವರ್ಷವೂ ಜಾತ್ರಾಮಹೋತ್ಸವ ಅದ್ದೂರಿಯಾಗಿ ಜರುಗಲಿ. ಶ್ರೀ ದುರದುಂಡೇಶ್ವರ ಮಠದ ಜೀರ್ಣೋದ್ಧಾರ ಸೇರಿದಂತೆ ಶೈಕ್ಷಣಿಕ ಕಾರ್ಯಗಳಿಗೆ ಒತ್ತು ನೀಡಲಾಗುವುದು ಎಂದು ಹೇಳಿದರು.

ಸಮ-ಸಮಾಜ ಮಕ್ಕಳಿಗೆ ಉತ್ತಮ ಶಿಕ್ಷಣ ದೊರಕಬೇಕಿದೆ. ಕ್ಷೇತ್ರದ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಅವರ ಸಮೀಪವೇ ಶಿಕ್ಷಣ ದೊರಕಿಸುವ ನಿಟ್ಟಿನಲ್ಲಿ ಸತತ ಪ್ರಯತ್ನ ಮಾಡಲಾಗುತ್ತಿದೆ. ಹೀಗಾಗಿ ಶ್ರೀಮಠದಲ್ಲಿ ಸಮುದಾಯ ಭವನ, ಮಕ್ಕಳಿಗೆ ವಸತಿ ನಿಲಯ ನಿರ್ಮಾಣ ಮಾಡಲಾಗುವುದು. ಶೈಕ್ಷಣಿಕ ಕಾರ್ಯಗಳು ನಡೆದಾಗ ಮಾತ್ರ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಲಭಿಸಲಿದೆ. ಅವರು, ಸಮಾಜದ ಮುಖ್ಯ ವಾಹಿನಿಗೆ ಬರಲು ಅನುಕೂಲವಾಗಲಿದೆ ಎಂದು ಸಚಿವರು ಹೇಳಿದರು.

ಶ್ರೀ ಮಠದ ಜೀರ್ಣೋದ್ಧಾರಕ್ಕೆ 10 ಲಕ್ಷ ರೂ. ದೇಣಿಗೆ ನೀಡಲಾಗಿದೆ. ಮಠದ ಅಭಿವೃದ್ಧಿಗೆ ಸದಾ ಸಹಾಯ-ಸಹಕಾರ ನೀಡಲಾಗುವುದು. ಎಲ್ಲರೂ ಶಿಕ್ಷಣದೆಡೆ ಸಾಗಬೇಕಿದೆ. ಹೀಗಾಗಿ ಶ್ರೀ ಮಠದ ಅಭಿವೃದ್ಧಿ ಸೇರಿದಂತೆ, ಶಿಕ್ಷಣ ಪ್ರಗತಿ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಕಾರಂಜಿಮಠದ ಶ್ರೀಗುರುಸಿದ್ಧ ಸ್ವಾಮಿಜೀಗಳು ಮಾತನಾಡಿ, ಸಂಸ್ಕೃತಿ ಪರಂಪರೆಯ ನಾಡಾಗಿರುವ ಕಡೋಲಿ ಕ್ಷೇತ್ರದಲ್ಲಿ ಶ್ರೀ ದುರದುಂಡೇಶ್ವರ ಮಠವು ಇಷ್ಟೊಂದು ಅಭಿವೃದ್ಧಿ ಹೊಂದುತ್ತಿರುವುದು ಹೆಮ್ಮೆಯ ವಿಷಯ, ಈ ಕ್ಷೇತ್ರದ ಶಾಸಕರ ಸಹಕಾರ-ಗ್ರಾಮಸ್ಥರ ಸಹಾಯದಿಂದ ಶ್ರೀಮಠವು ಸುಸಜ್ಜಿತವಾಗಿ ನಿರ್ಮಾಣಗೊಳುತ್ತಿದೆ. ಶೈಕ್ಷಣಿಕ ಕಾರ್ಯಗಳಿಗೆ ಸಚಿವರು ಅವರು ಸದಾ ಬೆಂಬಲ ನೀಡಿದ್ದಾರೆ. ಎಲ್ಲಾ ವರ್ಗದ ಮಕ್ಕಳು ಪ್ರಗತಿ ಕಾಣಲು ಬಹಳಷ್ಟು ಸಹಕಾರಿಯಾಗಲಿದೆ ಎಂದರು. ಅರಭಾಂವಿಮಠದ ಶ್ರೀಗಳು ನಿಮ್ಮ ಮಠಕ್ಕೆ ಪೀಠಾಧಿಪತಿಯಾಗಿದ್ದಾರೆ ಶ್ರೀಗಳ ನೇತೃತ್ವದಲ್ಲಿ ಸಮಾಜದಲ್ಲಿ ಅಭಿವೃದ್ಧಿ ಕಾರ್ಯಗಳು ನಿರಂತರವಾಗಿ ನಡೆಯಲಿ ಎಂದು ಶ್ರೀಗಳು ಶುಭಹಾರೈಸಿದರು.

ಅರಭಾವಿ ಮಠದ ಗುರು ಬಸವಲಿಂಗ ಮಹಾಸ್ವಾಮಿಜೀ ಮಾತನಾಡಿ, ಶಾಸಕರ ಸಹಕಾರದಿಂದ ಶ್ರೀ ದುರದುಂಡೇಶ್ವರ ಮಠವು ಜೀರ್ಣೋದ್ಧಾರವಾಗುತ್ತಿದೆ. ಅಧಿಕಾರ ಇದ್ದರೂ.. ಇರದೆ ಇದ್ದರೂ, ಶಾಸಕರಿಂದ ಅಭಿವೃದ್ಧಿ ಕಾರ್ಯ ನಿರಂತರವಾಗಿ ಸಾಗುತ್ತಿವೆ. ಸತೀಶ ಜಾರಕಿಹೊಳಿ ಅವರು ಸಚಿವರಾದ ಬಳಿಕ ರಾಜ್ಯದ ಜವಾಬ್ದಾರಿ ಅವರ ಹೆಗಲ ಮೇಲಿದೆ. ಈ ಸಮಯದಲ್ಲೂ ಕ್ಷೇತ್ರದ ಜನರ ಸಮಸ್ಯೆ ಆಲಿಸಿ, ಕ್ಷೇತ್ರದ ಅಭಿವೃದ್ಧಿಗೆ ಹಗಲಿರುಳು ಶ್ರಮಿಸುತ್ತಿರುವ ಅಪರೂಪ ನಾಯಕರು. ಮಠದ ಏಳಿಗೆಗೆ ಸಾಕಷ್ಟು ಶ್ರಮಿಸಿದ್ದಾರೆ. ಗ್ರಾಮದ ಅಭಿವೃದ್ಧಿಗೆ ಸಚಿವರ ಜತೆಗೂಡಿ ಗ್ರಾಮಸ್ಥರು ಕೆಲಸ ಮಾಡೋಣ. ಮಕ್ಕಳಿಗೆ ಕಡಿಮೆ ವೆಚ್ಚದಲ್ಲಿ ಗುಣಮಟ್ಟದ ಶಿಕ್ಷಣವನ್ನು ದೊರಕಿಸಲು ಸಚಿವರು ಪ್ರಯತ್ನ ಮಾಡುತ್ತಿದ್ದಾರೆ. ಅವರಿಗೆ ಗ್ರಾಮಸ್ಥರ ಸಹಕಾರ ನೀಡಬೇಕು ಎಂದು ಹೇಳಿದರು.

ಕಡೋಲಿ ಗ್ರಾಮದಲ್ಲಿರುವ ದುರದುಂಡೇಶ್ವರ ಮಠಕ್ಕೆ ಸಚಿವ ಸತೀಶ ಜಾರಕಿಹೊಳಿ ಅವರು ಭೇಟಿ ನೀಡಿದರು. ಈ ವೇಳೆ ಗ್ರಾಮಸ್ಥರು ಸಚಿವರನ್ನು ಆತ್ಮೀಯವಾಗಿ ಬರಮಾಡಿಕೊಂಡು, ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಶಾಸಕ ಬಾಬಾಸಾಹೇಬ್ ಪಾಟೀಲ್, ನಿವೃತ್ತ ಜಿಲ್ಲಾಧಿಕಾರಿ ಎಮ್ ಜಿ. ಹಿರೇಮಠ, ಸತೀಶ ನಾಯಕ, ಎಸ್ ಸೋಬರದ ಹಾಗೂ ಕಡೋಲಿ ಗ್ರಾಮಸ್ಥರು ಇತರರು ಇದ್ದರು.

# ಆರ್‌ಎಲ್ ಕಾನೂನು ಕಾಲೇಜಿನಲ್ಲಿ 14 ನೇ ಎಂ. ಕೆ. ನಂಬಿಯಾರ್ ರಾಷ್ಟ್ರ ಮಟ್ಟದ ಅಣುಕು ನ್ಯಾಯಾಲಯ ಸ್ಪರ್ಧೆ ಉದ್ಘಾಟನೆ

ಬೆಳಗಾವಿ: ಅಣುಕು ನ್ಯಾಯಾಲಯ ದಂತಹ ಸ್ಪರ್ಧೆಗಳು ಕಾನೂನು ಮತ್ತು ವಿಜ್ಞಾನದ ನಡುವೆ ಸೇತುವೆ ಕೊಂಡಿಯಂತೆ ಕಾರ್ಯ ನಿರ್ವಹಿಸುತ್ತವೆ. ಇಂತಹ ಸ್ಪರ್ಧೆಗಳು ಬಾರ್‌ನ ಗುಣಮಟ್ಟವನ್ನು ಹೆಚ್ಚಿಸುವುದರ ಜೊತೆಗೆ ಕಾನೂನು ಶಿಕ್ಷಣದ ಅನಿವಾರ್ಯ ಭಾಗವಾಗಿದೆ. ಎಂದು ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಅನಿಲ್ ಬಿ. ಕಟ್ಟಿ ಅಭಿಪ್ರಾಯ ಪಟ್ಟರು. ನಗರದ ಕೆ. ಎಲ್. ಎಸ್ ಸೊಸೈಟಿಯ ರಾಜಾ ಲಖಮಗೌಡ ಕಾನೂನು ಮಹಾವಿದ್ಯಾಲಯದ ಕೆ. ಕೆ. ವೇಣುಗೋಪಾಲ್ ಸಭಾಂಗಣ



ದಲ್ಲಿ ಆಯೋಜಿಸಲಾಗಿದ್ದ ಎಂ. ಕೆ. ನಂಬಿಯಾರ್ ರಾಷ್ಟ್ರ ಮಟ್ಟದ ಅಣುಕು ನ್ಯಾಯಾಲಯ ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡಿದರು.

ಅಧ್ಯಕ್ಷೀಯ ನುಡಿಗಳನ್ನಾಡಿದ ಕೆ. ಎಲ್.ಎಸ್ ಸೊಸೈಟಿಯ ಕಾರ್ಯದರ್ಶಿ ವಿ. ಜಿ. ಕುಲಕರ್ಣಿ ದೇಶದ ವಿವಿಧ ಭಾಗಗಳಿಂದ ಆಗಮಿಸಿದ್ದ ವಿದ್ಯಾರ್ಥಿಗಳನ್ನು ಸ್ವಾಗತಿಸಿದರು. ಎಂ. ಕೆ ನಂಬಿಯಾರ್ ಅಣುಕು ನ್ಯಾಯಾಲಯ ಸ್ಪರ್ಧೆಯು ದಕ್ಷಿಣ ಭಾರತದಲ್ಲೇ ಅತ್ಯಂತ ಪಾರದರ್ಶಕವಾಗಿ ನಡೆಯುವ ಉತ್ಕೃಷ್ಟ ಸ್ಪರ್ಧೆಯಾಗಿದೆ. ಹಾಗಾಗಿ ವಿದ್ಯಾರ್ಥಿಗಳು ಸ್ಪರ್ಧೆಗಳಲ್ಲಿ ಉತ್ಸಾಹದಿಂದ ಭಾಗವಹಿಸಿ ಎಂದು ಶುಭ ಹಾರೈಸಿದರು.

ಕಾಲೇಜಿನ ಪ್ರಾಚಾರ್ಯ ಡಾ. ಎ. ಎಚ್ ಹವಲ್ದಾರ್ ಆರ್. ಎಲ್ ಕಾನೂನು ಮಹಾವಿದ್ಯಾಲಯ ಸಮಾಜದ ಎಲ್ಲಾ ಕ್ಷೇತ್ರಗಳಲ್ಲೂ ಸರ್ವಾಂಗೀಣ ಸಮಗ್ರತೆಯನ್ನು ಕಾಯ್ದುಕೊಂಡಿದೆ ಎಂದು ಸಭಿಕರಿಗೆ ಕಾಲೇಜನ್ನು ಪರಿಚಯಿಸಿದರು. ಸ್ಪರ್ಧೆಯ ಸಂಯೋಜಕಿ ಪ್ರೊ. ಅಶ್ವಿನಿ ಪರಬ್ ವಿದ್ಯಾರ್ಥಿಗಳಿಗೆ ಸ್ಪರ್ಧೆಯ ನಿಯಮಗಳನ್ನು ವಿವರಿಸಿದರು.

ಕಾರ್ಯ ಕ್ರಮವನ್ನು ವಿದ್ಯಾರ್ಥಿಗಳಾದ ಕೇದಾರ್ ಗೋಡ್ಸೆ ಹಾಗೂ ತನ್ವಿ ನಿರೂಪಿಸಿ, ಪೂಜಾ ವಂದಿಸಿದರು. ಕಾಲೇಜಿನ ಮೂಟ್ ಸೊಸೈಟಿಯ ಅಧ್ಯಕ್ಷೆ ಪ್ರೊ. ಅಶ್ವಿನಿ ಪರಬ್, ವಿದ್ಯಾರ್ಥಿ ಕಾರ್ಯದರ್ಶಿ ಕು. ಶ್ರುತಿ ಕೊಳಕಿ ಹಾಗೂ ಪ್ರಾಧ್ಯಾಪಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕಿತ್ತೂರು ಜನತೆಗೆ ಕೊಟ್ಟ ಮಾತು ಈಡೇರಿಸಿದ ಸಚಿವ ಸತೀಶ್ ಜಾರಕಿಹೊಳಿ

## ವಿವಿಧ ಕಾಮಗಾರಿ ಕಾರ್ಯಗಳಿಗೆ ಚಾಲನೆ ಹಾಗೂ ಶಾಸಕರ ನೂತನ ಕಚೇರಿ ಉದ್ಘಾಟನೆ ಕಾರ್ಯಕ್ರಮ

ಚನ್ನಮ್ಮನ ಕಿತ್ತೂರು: ಕಿತ್ತೂರು ವಿಧಾನ ಸಭಾ ಕ್ಷೇತ್ರದ ಅಭಿವೃದ್ಧಿಗೆ ಅನುದಾನ ನೀಡುತ್ತೇನೆಂದು ಮಾತು ನೀಡಿದ್ದೆ ಅದರಂತೆಯೇ ಇಂದು ಅನುದಾನ ಮಂಜೂರು ಮಾಡಿದ್ದೇನೆ. ಅಲ್ಲದೆ ಹೆಚ್ಚುವರಿಯಾಗಿಯೂ ರೂ. 2.5 ಕೋಟಿಯನ್ನು ನೀಡಲಾಗಿದೆ ಈ ಎಲ್ಲ ಕಾರ್ಯಗಳ ಟೆಂಡರ್ ಪ್ರಕ್ರಿಯೇಗಳು ಮುಗಿದಿದ್ದು ಕೆಲಸ ಕಾರ್ಯಗಳು ಇನ್ನು ಆರಂಭಗೊಳ್ಳಲಿವೆ ಎಂದು ಜಿಲ್ಲಾ ಉಸ್ತುವಾರಿ ಹಾಗೂ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.




ಶನಿವಾರ ಪಟ್ಟಣದಲ್ಲಿ ವಿವಿಧ ಕಾಮಗಾರಿ ಕಾರ್ಯಗಳಿಗೆ ಹಾಗೂ ಶಾಸಕರ ನೂತನ ಕಚೇರಿ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರ ರಚನೆಯಾಗಿ ವರ್ಷ ತುಂಬುವ ಹೊತ್ತಲ್ಲೇ ಲೋಕೋಪಯೋಗಿ ಇಲಾಖೆಯಿಂದ ಸಾಕಷ್ಟು ಅಭಿವೃದ್ಧಿ ಕೆಲಸಗಳಿಗೆ ಅನುದಾನವನ್ನು ಒದಗಿಸಲಾಗಿದೆ ವಿಶೇಷವಾಗಿ ಬಾಬಾಸಾಹೇಬ ಅವರು ನೂತನವಾಗಿ ಶಾಸಕರಾದ ತಕ್ಷಣವೇ ಕಿತ್ತೂರು ಉತ್ಸವದ ಸಂದರ್ಭದಲ್ಲಿ ಕಿತ್ತೂರು ಪಟ್ಟಣದ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡುವಂತೆ ಮನವಿ ಮಾಡಿದ್ದರು. ಪ್ರತಿ ವರ್ಷ ಐದು ಕೋಟಿ ಅನುದಾನ ನೀಡುವ ಭರವಸೆ ನೀಡಿದಂತೆ ಭರವಸೆಗೂ ಮೀರಿ ಪಟ್ಟಣದ ಅಭಿವೃದ್ಧಿಗೆ 7.5 ಕೋಟಿ ಅನುದಾನವನ್ನು ಒದಗಿಸಲಾಗಿದೆ ಇದಕ್ಕೆ ಅವರ ಕ್ರಿಯಾಶೀಲತೆಯೇ ಕಾರಣ ಎಂದರು.

ಇದಲ್ಲದೇ ರಸ್ತೆ ಅಭಿವೃದ್ಧಿ ಕೆಲಸಗಳಿಗಾಗಿ ಸಾಕಷ್ಟು ಅನುದಾನ ನೀಡಿದ್ದು ಪ್ರಸ್ತುತ ಟೆಂಡರ್ ಹಂತದಲ್ಲಿವೆ ಲೋಕಸಭಾ ಚುನಾವಣೆ ನಂತರ ಪ್ರಾರಂಭವಾಗುತ್ತವೆ ಎಂದ ಅವರು, ಸದ್ಯ ನನ್ನ ಇಲಾಖೆಯ ಅನುದಾನದಲ್ಲಿ ಕ್ಷೇತ್ರಕ್ಕೆ 5 ಸರ್ಕಾರಿ ಶಾಲೆಯನ್ನು ನೀಡಿದ್ದೇನೆ, ಅವಸಾನದ ಅಂಚಿನಲ್ಲಿರುವ ಶಾಲೆಗಳ ಕಟ್ಟಡ ಇನ್ನು ಮುಂದೆ ನವೀಕರಣಗೊಳ್ಳಲಿವೆ, ಬೈಲಹೊಂಗಲ ಕ್ಷೇತ್ರದಲ್ಲಿಯೂ ರೂ. 2 ಕೋಟಿ ಅನುದಾನ ಮಂಜೂರು ಮಾಡಲಾಗಿದೆ ಅಲ್ಲಿಯೂ ಅಂತರಾಷ್ಟ್ರೀಯ ಈಜುಗೋಳ ನಿರ್ಮಾಣವಾಗಲಿದೆ ಎಂದು ಹೇಳಿದ ಅವರು, ಕ್ಷೇತ್ರದ ಜನರ ನಿರೀಕ್ಷೆಯಂತೆ ಶಾಸಕ ಬಾಬಾಸಾಹೇಬ ಪಾಟೀಲ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿದ್ದಾರೆ, ಜನರ ರಕ್ಷಣೆಯೂ ಪಾಟೀಲ ಅವರಿಗೆ ಅವಶ್ಯವಾಗಿದೆ, ಜೊತೆಗೆ ಜನರಿದ್ದಷ್ಟು ದಿನಗಳು ಸೋಲು ದೂರವಾಗಿರುತ್ತೆ ಎಂದರು.

ಚನ್ನಮ್ಮನ ಕಿತ್ತೂರಿಗೆ ವಿಶೇಷ ಕಾಳಜಿಯಿಂದ ಹೆಚ್ಚು ಕೆಲಸ ಕೊಡುವ ಕಾರ್ಯ ನಾನು ಪ್ರಾಮಾಣಿಕನಾಗಿ ಮಾಡುತ್ತೇನೆ, ನೂತನ ಶಾಸಕರಿಗೆ ರಕ್ಷಣೆ ಕೊಟ್ಟು ಮತ್ತೆ ಅವರನ್ನು ಬೆಂಬಲಿಸುವ ಕಾರ್ಯ ಕ್ಷೇತ್ರದ ಜನರು ಮಾಡಬೇಕಿದೆ ಎಂದು ಹೇಳಿದರು.

ಲೋಕಸಭಾ ಚುನಾವಣೆಯ ಕುರಿತು ಮಾತನಾಡಿದ ಸಚಿವ ಸತೀಶ ಜಾರಕಿಹೊಳಿ, ಚುನಾವಣೆ ಸಮೀಪ ಬಂದಂತೆ ಆಸ್ಪತ್ರೆಯಿಂದ ಎದ್ದು ಬರುವ ಜನರಿದ್ದಾರೆ ಅವರು ಯಾರನ್ನೂ ಮನಸೋಇಚ್ಛೆ ಬೈಯುವ ಮೂಲಕ ಮತ್ತೆ ಸುದ್ಧಿಯಲ್ಲಿ ಬರುತ್ತಾರೆ, ಬಯ್ಯುವದರಿಂದ ಯಾವುದೇ ಪರಿಹಾರ ದೊರೆಯುವದಿಲ್ಲ, ದಿಲ್ಲಿಯಿಂದ ಬಂದು ಇಲ್ಲಿ ನಿಮಗೆ ಟೋಪಿ ಹಾಕಿ ಹೋಗುವವರನ್ನು ಕ್ಷೇತ್ರದ ಜನ ನಂಬದೆ, ಸದಾ ನಿಮ್ಮೊಂದಿಗಿರುವವರನ್ನು ಬೆಂಬಲಿಸಿ ಎಂದು ಮಾರ್ಮಿಕವಾಗಿ ಜನರಿಗೆ ಹೇಳುವ ಮೂಲಕ ಅನಂತಕುಮಾರ ಹೆಗಡೆ ಅವರಿಗೆ ಪರೋಕ್ಷವಾಗಿ ಚಾಟಿ ಬೀಸಿದರು.

ಶಾಸಕ ಬಾಬಾಸಾಹೇಬ ಪಾಟೀಲ ಮಾತನಾಡಿ, ಸಚಿವರ ಸಹಕಾರದಿಂದ ಕಿತ್ತೂರು ಪಟ್ಟಣ ಅಭಿವೃದ್ಧಿಯತ್ತ ಸಾಗಲಾರಂಭಿಸಿದೆ, ಪ್ರತಿ ವರ್ಷವೂ ಸಚಿವರು ರೂ. 5 ಕೋಟಿ ಅನುದಾನ ನೀಡುವ ಭರವಸೆ ಈ ಹಿಂದೆ ನೀಡಿದ್ದರೂ ಆದರೆ ಇಂದು ತಮ್ಮ ಇಲಾಖೆಯಿಂದಲೆ ರೂ. 7.5 ಕೋಟಿ ಅನುದಾನ ನೀಡುವ ಮೂಲಕ ಕೊಟ್ಟ ಮಾತು ಉಳಿಸಿಕೊಂಡಿದ್ದಾರೆ, ಅದರಂತೆಯೇ ಕಿತ್ತೂರಿನಲ್ಲಿ ಪ್ರವಾಸೋದ್ಯಮವನ್ನು ಉತ್ತೇಜಿಸುವ ಕಾರ್ಯವಾಗಬೇಕಿದೆ ಈ ಕುರಿತು ಹಲವಾರು ಯೋಜನೆಗಳನ್ನು ನಿರ್ಮಿಸಲಾಗಿದೆ, ಅಲ್ಲದೆ ಬೆಳಗಾವಿ ಜಿಲ್ಲೆಯಲ್ಲಿಯೇ ಕಿತ್ತೂರು ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ದೊರೆತಿದೆ ಎಂದ ಅವರು, ಅಭಿವೃದ್ಧಿ ಪಡಿಸುವ ಗುರಿ ನನ್ನದಿದ್ದು ಪಟ್ಟಣದ ಚಿತ್ರಣವೆ ಬದಲಾಗಲಿದೆ ಎಂದು ಹೇಳಿದರು.

# ಕೈಕೊಟ್ಟ ಪ್ರೇಯಸಿ: ಚಾಕುವಿನಿಂದ ಚುಚ್ಚಿಕೊಂಡು ಯುವಕ ಸಾವು



ಬೆಂಗಳೂರು: ಪ್ರೀತಿಸಿದ ಹುಡುಗಿ ದೂರ ಆಗಿದ್ದಕ್ಕೆ ನೊಂದ ಯುವಕ ಚಾಕುವಿನಿಂದ ಹೊಟ್ಟೆಗೆ ತಿವಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೆಂಗಳೂರಿನ ನಂದಿನಿ ಲೇಔಟ್ನಲ್ಲಿ ನಡೆದಿದೆ. ಮೃತ ಯುವಕನನ್ನು ದಾವಣಗೆರೆ ಮೂಲದ ಚೇತನ್ (21) ಎಂದು ಗುರುತಿಸಲಾಗಿದೆ.

ಚೇತನ್ ಎರಡು ವರ್ಷದಿಂದ ಜನನಿ ಎಂಬಾಕೆಯನ್ನು ಪ್ರೀತಿಸುತ್ತಿದ್ದ. ಇಬ್ಬರು ಕಾಲೇಜಿನಲ್ಲಿ ಪಿಯುಸಿ ಓದುವಾಗಲೇ ಪರಿಚಯವಾಗಿ ಲವ್ ಆಗಿತ್ತು. ಆದರೆ ಇವರಿಬ್ಬರ ಪ್ರೀತಿ ವಿಷಯವು ಹುಡುಗಿ ಕಡೆಯವರಿಗೆ ಗೊತ್ತಾಗಿತ್ತು. ಈ ಹಿನ್ನಲೆ ಹುಡುಗಿಯ ಚಿಕ್ಕಪ್ಪ ಚೇತನ್ ಜೊತೆ ಮದುವೆಗೆ ಒಪ್ಪಿರಲಿಲ್ಲ.

ಇತ್ತೀಚೆಗೆ ಚೇತನ್‌ನ್ನು ಭೇಟಿಯಾದಾಗ, ನಮ್ಮಿಬ್ಬರ ಮದುವೆಗೆ ನಮ್ಮ ಚಿಕ್ಕಪ್ಪ ಒಪ್ಪುತ್ತಿಲ್ಲ. ನೀನು ಬೇರೆ ಹುಡುಗಿನಾ ಮದುವೆ ಆಗು ಎಂದಿದ್ದಾಳೆ.

ಇದರಿಂದ ಮನನೊಂದಿದ್ದ ಚೇತನ್, ನಿನ್ನೆ ರಾತ್ರಿ 11 ಗಂಟೆಗೆ ಹುಡುಗಿ ಮನೆ ಬಳಿ ಹೋಗಿ ಗಲಾಟೆ ಮಾಡಿದ್ದ. ಈ ವೇಳೆ ಜನನಿ ಪೋಷಕರೊಟ್ಟಿಗೆ ಮಾತನಾಡುವಾಗ ಚೇತನ್ ಕತ್ತರಿಯಿಂದ ಹೊಟ್ಟೆಗೆ ತಿವಿದುಕೊಂಡಿದ್ದಾನೆ.

ಖಾಸಗಿ ಆಸ್ಪತ್ರೆಗೆ ದಾಖಲಿಸಿದ ಬಳಿಕ ಚಿಕಿತ್ಸೆ ಫಲಕಾರಿಯಾಗದೇ ಚೇತನ್ ಕೊನೆಯುಸಿರೆಳೆದಿದ್ದಾನೆ.

ಚೇತನ್ ಕುಟುಂಬಸ್ಥರು ಹುಡುಗಿ ಮನೆಯವರೇ ಕೊಲೆ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ. ಸದ್ಯ ನಂದಿನಿ ಲೇಔಟ್ ಪ್ರಕರಣ ದಾಖಲಾಗಿದ್ದು, ಪರಿಶೀಲನೆ ನಡೆಸುತ್ತಿದ್ದಾರೆ.

# ಚಾಲಿತ ಬಸ್‌ನಿಂದ ಆಯತಪ್ಪಿ ಬಿದ್ದು ಕಂಡಕ್ಟರ್ ಸಾವು



ಮೈಸೂರು: ಕೆಎಸ್‌ಆರ್‌ಟಿಸಿ ಬಸ್ನ ಬಾಗಿಲಲ್ಲಿ ನಿಂತಿದ್ದ ಕಂಡಕ್ಟರ್ ಆಯತಪ್ಪಿ ಬಿದ್ದು, ಸ್ಥಳದಲ್ಲೇ ಸಾವನ್ನಪ್ಪಿರುವ ದಾರುಣ ಘಟನೆ ನಂಜನಗೂಡು ತಾಲೂಕಿನ ಮಲ್ಲನಮೂಲೆ ಮಠದ ಬಳಿ ನಡೆದಿದೆ.

ಮಹದೇವಸ್ವಾಮಿ (35) ಮೃತ ದುರ್ದೈವಿಯಾಗಿದ್ದಾರೆ. ಮೃತರು ಚಾಮರಾಜನಗರ ತಾಲೂಕಿನ ಹರವೆ ಹೋಬಳಿಯ ಹಳೇಪುರ ಗ್ರಾಮದವರು ಎಂಬುದಾಗಿ ತಿಳಿದು ಬಂದಿದೆ. ಇಂದು ಬೆಳಗ್ಗೆ 10 ಗಂಟೆ ವೇಳೆಗೆ ದುರ್ಘಟನೆ ಸಂಭವಿಸಿದ್ದು, ನಂಜನಗೂಡು ಕೆ-ಎಸ್‌ಆರ್‌ಟಿಸಿ ಬಸ್ ನಿಲ್ದಾಣದಿಂದ ಮೈಸೂರಿಗೆ ತೆರಳುತ್ತಿದ್ದಾಗ ನಡೆದಿದೆ.

ಮಲ್ಲನಮೂಲೆ ಮಠದ ಬಳಿ ಬಸ್ ವೇಗವಾಗಿ ಸಂಚರಿಸಿದ್ದು, ಈ ವೇಳೆ ಬಾಗಿಲ ಬಳಿ ನಿಂತಿದ್ದ ಕಂಡಕ್ಟರ್ ಮಹದೇವಸ್ವಾಮಿ ಆಯತಪ್ಪಿ ಬಿದ್ದಿದ್ದಾರೆ. ಕೆಳಗಡೆ ಬಿದ್ದ ಪರಿಣಾಮ ತಲೆಗೆ ತೀವ್ರವಾಗಿ ಪೆಟ್ಟು ಬಿದ್ದು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ವಿಚಾರ ತಿಳಿದು ಸ್ಥಳಕ್ಕೆ ನಂಜನಗೂಡು ಡಿವೈಎಸ್‌ಪಿ ರಘು, ಪಟ್ಟಣ ಪೊಲೀಸ್ ಠಾಣೆಯ ಪಿಎಸ್‌ಐ ಬಸವರಾಜು, ಸಂಚಾರಿ ಪೊಲೀಸ್ ಠಾಣೆಯ ಪಿಎಸ್‌ಐ ಜಯಪ್ರಕಾಶ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಶವವನ್ನು ಮರಣೋತ್ತರ ಪರೀಕ್ಷೆಗೆ ನಂಜನಗೂಡಿನ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಲಾಗಿದೆ. ಈ ಬಗ್ಗೆ ನಂಜನಗೂಡು ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಶಿವಯೋಗ ನಮ್ಮ ಬದುಕಿಗೆ ಚೈತನ್ಯ ತುಂಬುತ್ತದೆ: ಡಾ. ಬಸವರಾಜಜಗಜಂಪಿ

## ಕಾರಂಜಿ ಮಠದಲ್ಲಿ ಶಿವಾನುಭವ ಗೋಷ್ಠಿ ಹಾಗೂ ಮಹಾಶಿವರಾತ್ರಿ

ಬೆಳಗಾವಿ: ಶಿವರಾತ್ರಿಯು ಕೇವಲ ಜಾಗರಣೆಯ ದಿನವಲ್ಲ. ಇದುಜಾಗೃತಿಯ ದಿವಸ. ಶಿವನೊಂದಿಗೆ ಕೊಡುವುದೇ ಉಪವಾಸ. ಶಿವಾಯ ನಮಃ ಪಂಚಾಕ್ಷರಿ ಮಂತ್ರದಲ್ಲಿ ಶಿವನ ಮಹತ್ವ ಹಾಗೂ ಮಾನಸಿಕ ದೈಹಿಕಆರೋಗ್ಯದ ಪರಿಹಾರವಿದೆಯೆಂದು ಹಿರಿಯ ಸಾಹಿತಿಡಾ. ಬಸವರಾಜ್‌ಜಗಜಂಪಿಯವರು ಹೇಳಿದರು.

ಅವರು ಬೆಳಗಾವಿಯ ಕಾರಂಜಿ ಮಠದಲ್ಲಿ ಆಯೋಜಿಸಿದ್ದ 272ನೇ ಶಿವಾನುಭವ ಹಾಗೂ ಮಹಾಶಿವರಾತ್ರಿ ಕಾರ್ಯಕ್ರಮದಲ್ಲಿಉಪನ್ಯಾಸ ನೀಡಿದರು.

ಕನ್ನಡ ಪ್ರಾಚೀನ ಸಾಹಿತ್ಯದಲ್ಲಿಯೂಕೂಡ ಶಿವರಾತ್ರಿ ಮಹಿಮೆಯನ್ನುಕುರಿತು ಅನೇಕ ಕಥ-'ಗಳು ಉಪಕಥೆಗಳು ಅನಾವರಣಗೊಂಡಿವೆ. ಶಿವ ಸೌಂದರ್ಯದರೂಪ. ಜಗದ ನಿರ್ಮಾತೃ. ವಚನಕಾರರು ಶಿವನನ್ನು ಜಗತ್ತಿನಚರಾಚರದಲ್ಲಿ ಯೂಕೂಡಕಂಡರು. ಅಂತಹ ಶಿವರಾತ್ರಿ ನಮ್ಮ ಬದುಕಿನಆತ್ಮಯೋಗವನ್ನು ಹೆಚ್ಚಿಸುತ್ತದೆಎಂದು ಹೇಳಿದರು.




ಅಧ್ಯಕ್ಷತೆ ವಹಿಸಿದ್ದ ರಾಘವೇಂದ್ರಕಾಗವಾಡಅವರು ಮಾತನಾಡುತ್ತ, ಉಪವಾಸ,ಜಾಗರಣೆ, ಪೂಜೆಯು- ಶಿವರಾತ್ರಿಯ ಮಹತ್ವದ ಮೂರು ಅಂಗಗಳಾಗಿವೆ. ಒಂದು ಹಗಲು ಒಂದುರಾತ್ರಿ ಸಂಸಾರದಜಂಜಾಟದಿಂದದೂರವಿದ್ದು ಶಿವಸ್ತುತಿ, ಶಿವಧ್ಯಾನದಲ್ಲಿ ಮಗ್ನವಾಗಿ ಬದುಕನ್ನು ಚಿರಂತನಗೊಳಿಸಬೇಕೆಂದು ವಚನಕಾರರುದಾಸರು ಅಭಿವ್ಯಕ್ತಿಪಡಿಸಿದ್ದಾರೆ. ಧರ್ಮಅರ್ಥ ಕಾಮ ಮೋಕ್ಷಗಳನ್ನು ಶಿವಮಾರ್ಗದಲ್ಲಿ ಪೂರೈಸಿಕೊಂಡು ಈ ಬದುಕನ್ನು ಅರ್ಥಪೂರ್ಣಗೊಳಿಸಬೇಕೆ ಬುದೇ ಶಿವರಾತ್ರಿಯ ದಿವ್ಯ ಸಂದೇಶವಾಗಿದೆಎಂದು ನುಡಿದರು.

ಸಾನಿಧ್ಯವನ್ನು ವಹಿಸಿದ್ದ ನಾಗನೂರುರುದ್ರಾಕ್ಷಿ ಮಠದ ಪರಮಪೂಜ್ಯಡಾ. ಅಲ್ಲಮಪ್ರಭು ಮಹಾಸ್ವಾಮಿಗಳು ಆಶೀರ್ವಚನ ನೀಡುತ್ತಾ, ಭಗವಂತ ನಮಗೆ ಸಾಕಷ್ಟು ಕಾಲಾವಕಾಶ ನೀಡಿದ್ದರೂ ನಮಗೆಲ್ಲ ಶಿವನನ್ನು ಸ್ಮರಿಸಲು ಸಾಧ್ಯವೇಆಗುತ್ತಿಲ್ಲ. ಶಿವಸ್ಮರಣೆ ಮಾತ್ರ ನಮ್ಮ ಬದುಕಿಗೆಚೈತನ್ಯವನ್ನು ಶಕ್ತಿ ಸಾಮರ್ಥ್ಯಗಳನ್ನು ತಂದುಕೊಡುತ್ತದೆ. ಮಠಮಾನ್ಯಗಳು ಅಂತ ಶಿವ ದರ್ಶನವನ್ನ ಮಾಡುವ ಕೆಲಸವನ್ನು ಅನಾದಿಕಾಲದಿಂದಲೂ ಮಾಡಿಕೊಂಡು ಬರುತ್ತಿವೆ. ಮಕ್ಕಳಿಗೆ ಶಿವ ಧ್ಯಾನ ಶಿವಯೋಗವನ್ನು ಕಳಿಸಿಕೊಡುವುದು ಇಂದಿನ ಅನಿವಾರ್ಯತೆಇದೆಎಂದು ತಿಳಿಸಿದರು.

ಪೂಜ್ಯಕಾರಂಜಿಮಠದ ಗುರುಸಿದ್ಧ ಮಹಾಸ್ವಾಮಿ-ಜಿಯವರು ಸಾನಿಧ್ಯ ವಹಿಸಿದ್ದರು. ಶೋಭಾ ಮಲ್ಲಿಕಾರ್ಜುನ್‌ಜಾಬಿನ್ ವಚನ ಪ್ರಾರ್ಥನೆ ಸಲ್ಲಿಸಿದರು. ಶ್ರೀಕಾಂತ್ ಶಾನವಾಡ ಪ್ರಸ್ತಾವಿಕವಾಗಿ ಮಾತನಾಡಿದರು. ವಿ ಕೆ ಪಾಟೀಲ್ ವಂದಿಸಿದರು. ಏಕೆ ಪಾಟೀಲ್‌ಕಾರ್ಯಕ್ರಮ ನಿರೂಪಿಸಿದರು.

# ಅಮಾವಾಸ್ಯೆಯ ಅನುಭಾವ ಗೋಷ್ಠಿ

ಬೆಳಗಾವಿ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ, ಜಿಲ್ಲಾಘಟಕ ಅಮವಾಸ್ಯೆಯ ಅನುಭಾವಗೋಷ್ಠಿ ರವಿವಾರ ದಿನಾಂಕ 10-03-2024 ರಂದು ಸಾಯಂಕಾಲ 5.00 ಗಂಟೆಗೆ, ಲಿಂಗಾಯತ ಭವನ, ಶಿವಬಸವ ನಗರ ಬೆಳಗಾವಿಯಲ್ಲಿ ಜರುಗುವುದು.

ಶ್ರೀ ಮ.ನಿ.ಪ್ರ.ಪೂಜ್ಯ ಗುರುಸಿದ್ಧ ಮಹಾಸ್ವಾಮಿಗಳು, ಕಾರಂಜಿಮಠ, ಬೆಳಗಾವಿ ಇವರು ಸಾನಿಧ್ಯ ವಹಿಸುವರು. ಶರಣೆ ಡಾ॥ ಬಸಮ್ಮ ಗಂಗನಳ್ಳಿ ಮುಖ್ಯಸ್ಥರು ಕನ್ನಡ ವಿಭಾಗ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಬೆಳಗಾವಿ ಇವರು "ಶರಣೆಯರ ವಚನಗಳಲ್ಲಿ ನುಡಿ ಪರಿಕಲ್ಪನೆ" ಎಂಬ ವಿಷಯದ ಮೇಲೆ ಅನುಭಾವ ನೀಡಲಿದ್ದಾರೆ. ಜಿಲ್ಲಾಧ್ಯಕ್ಷರಾದ ಶ್ರೀಮತಿ ರತ್ನಪ್ರಭಾ ಬೆಲ್ಲದ ಇವರು ಅಧ್ಯಕ್ಷತೆ ವಹಿಸುವರು.

ಕಾರಣ ಎಲ್ಲ ಬಸವಾಭಿಮಾನಿಗಳು ಸಮಯಕ್ಕೆ ಸರಿಯಾಗಿ ಆಗಮಿಸಿ ಅಮವಾಸ್ಯೆಯ ಅನುಭಾವಗೋಷ್ಠಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಪ್ರಧಾನ ಕಾರ್ಯದರ್ಶಿಗಳು ವಿನಂತಿ-ಕೊಂಡಿದ್ದಾರೆ.

# ಮಾ.11 ರಂದು ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಸಮಾವೇಶ ಕಾರ್ಯಕ್ರಮ

ಬಳ್ಳಾರಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಇವರ ಸಂಯುಕ್ತಾಶ್ರಯದಲ್ಲಿ 'ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಸಮಾವೇಶ' ಕಾರ್ಯಕ್ರಮವನ್ನು ಮಾ.11 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಮೋಕಾ ರಸ್ತೆಯ ಸುವರ್ಣ ಇಂಟರ್ನ್ಯಾಷನಲ್ ಸ್ಕೂಲ್ ಮೈದಾನದಲ್ಲಿ ಆಯೋಜಿಸಲಾಗಿದೆ.

ಉಪಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಯುವ ಸಬಲೀಕರಣ, ಕ್ರೀಡಾ, ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ನಾಗೇಂದ್ರ ಅವರು ಘನಉಪಸ್ಥಿತಿ ಇರುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ರಾಜ್ಯ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತ ಅಧ್ಯಕ್ಷರೂ ಆದ ಕಂಪ್ಲಿ ಶಾಸಕ ಜೆ.ಎನ್. ಗಣೇಶ್, ಸಂಸದರಾದ ವೈ.ದೇವೆಂದ್ರಪ್ಪ, ಕರಡಿ ಸಂಗಣ್ಣ, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಈ.ತುಕರಾಂ, ಬಿ.ಎಂ.ನಾಗರಾಜ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ್, ಶಶೀಲ್ ಜಿ.ನಮೋಶಿ, ವೈ. ಎಂ.ಸತೀಶ್, ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ ಅಧ್ಯಕ್ಷರಾದ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆ ಮಹಾಪೌರರಾದ ಬಿ.ಶ್ವೇತ, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಜೆ.ಎಸ್.ಆಂಜನೇಯಲು ಹಾಗೂ ಇನ್ನಿತರೆ ಜನಪ್ರತಿನಿಧಿಗಳು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜೀತ್ ಕುಮಾರ್ ಬಂಡಾರು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಸೇರಿದಂತೆ ಮತ್ತಿತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಬಾನುಲಿಯಿಂದ ಮಹಾಪೌರರ ಸಂದರ್ಶನ




ಬೆಳಗಾವಿ: ಮಹಿಳೆಯರಿಗೆ ಅವಕಾಶ ಕೊಟ್ಟಲ್ಲಿ ಎಲ್ಲ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಬಲ್ಲಳು ಎಂಬುದನ್ನು ಈಗಾಗಲೇ ತೋ-ರಿಸಿದ್ದಾರೆ, ಅವಳ ಪರಿಶ್ರಮ, ತ್ಯಾಗ, ಸಹನೆಯನ್ನು ಗುರುತಿಸುವುದರ ಜೊತೆಗೆ ಮಹಿಳೆಯರನ್ನು ಗೌರವಿಸಿ ಸಮಾನತೆಯಿಂದ ಕಾಣಬೇಕು ಎಂದು ಬೆಳಗಾವಿಯ ಮಹಾಪೌರರಾದ ಸವಿತಾ ಕಾಂಬಳೆ ನುಡಿದರು.

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಮಹಿಳಾ ಕಲ್ಯಾಣ ಸಂಸ್ಥೆಯ "ನಮ್ಮೂರ ಬಾನುಲಿ" ರೇಡಿಯೋ ಕೇಂದ್ರಕ್ಕೆ ನಿಡಿದ ವಿಶೇಷ ಸಂದರ್ಶನದಲ್ಲಿ ತಾವು ನಡೆದು ಬಂದ ಹಾದಿ ಕಷ್ಟದ ಜೀವನ ನೆನೆದು ತಮ್ಮನ್ನು ಇಲ್ಲಿಯವರೆಗೆ ಬೆಂಬಲಿಸಿದ ಎಲ್ಲರನ್ನು ಸ್ಮರಿಸಿದರು. ಇಷ್ಟೆಲ್ಲಾ ಮುಂದುವರೆದ ದಿನಗಳಲ್ಲಿಯೂ ಮಹಿಳೆಯರ ಮತ್ತು ಮಕ್ಕಳ ಮೇಲಾಗುತ್ತಿರುವ ದೌರ್ಜನ್ಯ, ಸಾಗಾಣಿಕೆ, ಬಾಲ್ಯವಿವಾಹ ತಡೆ ಕುರಿತು ಸಂಸ್ಥೆ ತೆಗೆದುಕೊಳ್ಳುತ್ತಿರುವ ಕ್ರಮಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ ಅಭಿನಂದಿಸಿದರು.

ಮಹಿಳಾ ಕಲ್ಯಾಣ ಸಂಸ್ಥೆಯ ಗೌರವ ಕಾರ್ಯದರ್ಶಿ ವೈಜಯಂತಿ ಚೌಗಲಾ ಉಪಸ್ಥಿತ-ರಿದ್ದರು ನಮ್ಮೂರ ಬಾನುಲಿಯ ಆರ ಜೆ ಚೇತನ್ ಸಂದರ್ಶನ ನಡೆಸಿದರು.

# ರಾಜಕೀಯದಲ್ಲಿ ಆಸಕ್ತಿ ಇಲ್ಲ, ಪ್ರಚಾರದಲ್ಲಿ ಭಾಗವಹಿಸಲ್ಲ: ನಟ ಡಾಲಿ ಧನಂಜಯ್



ಮಂಡ್ಯ: ಚಲನಚಿತ್ರವೇ ನನ್ನ ಜೀವನ, ನನಗೆ ಅದರಲ್ಲೇ ಆಸಕ್ತಿ, ರಾಜಕೀಯದಲ್ಲಿ ನನಗೆ ಆಸಕ್ತಿ ಇಲ್ಲ, ಚುನಾವಣೆ ಪ್ರಚಾರದಲ್ಲಿ ಭಾಗವಹಿಸುವ ಸಾಧ್ಯತೆಗಳಿಲ್ಲ ಎಂದು ನಟ, ನಿರ್ಮಾಪಕ ಡಾಲಿ ಧನಂಜಯ್ ಹೇಳಿದರು.

ಜಿಲ್ಲೆಯ ಕೆರೆಗೋಡಿನ ಪಂಚಲಿಂಗೇಶ್ವರ ದೇವಸ್ಥಾನದಲ್ಲಿ ಶಿವರಾತ್ರಿ ಪ್ರಯುಕ್ತ ಆಯೋಜಿಸಲಾಗಿದ್ದ ಕಾರ್ಯಕ್ರಮದ ಬಳಿಕ ಮಾತನಾಡಿದ ಅವರು, ಮುಖ್ಯಮಂತ್ರಿಯವರನ್ನು ವೈಯಕ್ತಿಕವಾಗಿ ಭೇಟಿ ಮಾಡುವ ಸಂದರ್ಭಗಳು ಬಂದಿಲ್ಲ. ಇತ್ತೀಚೆಗೆ ಬೆಂಗಳೂರು ಅಂತರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ಮುಖ್ಯಮಂತ್ರಿಯವರನ್ನು ಭೇಟಿ ಮಾಡಿದ್ದೇನೆ. ಅದನ್ನು ಹೊರತುಪಡಿಸಿ ವೈಯಕ್ತಿಕವಾಗಿ ಭೇಟಿ ಮಾಡಿಲ್ಲ ಎಂದು ಹೇಳಿದರು.

ಕಳೆದ ವಿಧಾನಸಭೆ ಚುನಾವಣೆಯಲ್ಲೂ ಪ್ರಚಾರಕ್ಕಾಗಿ ನನಗೆ ಆಹ್ವಾನವಿತ್ತು. ಆದರೆ ನಾನು ಭಾಗವಹಿಸಿರಲಿಲ್ಲ.

ಈ ಬಾರಿ ಲೋಕಸಭೆ ಚುನಾವಣೆಯಲ್ಲೂ ಪ್ರಚಾರದಲ್ಲಿ ಭಾಗವಹಿಸುವ ನಿರೀಕ್ಷೆಗಳು ಕಡಿಮೆ ಎಂದರು. ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸುವ ಎಲ್ಲಾ ಪಕ್ಷದ ಅಭ್ಯರ್ಥಿಗಳಿಗೂ ಶುಭವಾಗಲಿ. ನಾನು ಯಾವುದೇ ಒಂದು ಪಕ್ಷದ ಅಭ್ಯರ್ಥಿಗಳ ಪರವಾಗಿ ಮಾತನಾಡುವುದಿಲ್ಲ ಎಂದು ಹೇಳಿದರು.

# ಮಹಿಳಾ ಪೌರಕಾರ್ಮಿಕರನ್ನು ಸನ್ಮಾನಿಸಿದ ಎಚ್‌ಸಿಜಿ ಎನ್‌ಎಂಆರ್ ಕ್ಯಾನ್ಸರ್ ಸೆಂಟರ್

ಹುಬ್ಬಳ್ಳಿ: ಕ್ಯಾನ್ಸರ್ ಆರೈಕೆಗೆ ಹೆಸರಾಗಿರುವ ಹುಬ್ಬಳ್ಳಿಯ ಎಚ್‌ಸಿಜಿ ಎನ್‌ಎಂಆರ್ ಕ್ಯಾನ್ಸರ್ ಸೆಂಟ-ರ್ ವತಿಯಿಂದ ಅಂತಾರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯಿಂದ ಗುರುತಿಸಲ್ಪಟ್ಟ ಮಹಿಳಾ ಪೌರಕಾರ್ಮಿಕರ ಗಮನಾರ್ಹ ಕೊಡುಗೆಯನ್ನು ಸ್ಮರಿಸಿ ಸನ್ಮಾನ ಕಾರ್ಯಕ್ರಮ ಆಯೋಜಿಸಲಾಗಿತ್ತು. ಉತ್ತಮ ಸೇವೆ ಮತ್ತು ಸಮಾಜಕ್ಕೆ ನೀಡಿದ ಕೊಡುಗೆಗಾಗಿ 10 ಮಹಿಳಾ ಪೌರಕಾರ್ಮಿಕರು ಮತ್ತು 5 ಎಚ್‌ಸಿಜಿ ಮಹಿಳಾ ಸಿಬ್ಬಂದಿಯನ್ನು ಗೌರವಿಸಲಾಯಿತು.

ಆಸ್ಪತ್ರೆಯು ಮಾರ್ಚ್ 8 ರಿಂದ ಒಂದು ವಾರದವರೆಗೆ ಪೌರಕಾರ್ಮಿಕರು ಮತ್ತು ಸಾರ್ವಜನಿಕರಿಗೆ ಉಚಿತ ಪ್ಯಾಪ್ ಸ್ಮಿಯರ್ ಮತ್ತು ಮ್ಯಾಮೊಗ್ರಾಮ್ ಪರೀಕ್ಷೆಗಳನ್ನು ನಡೆಸುತ್ತಿದೆ.




ಅಂತಾರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ಹುಬ್ಬಳ್ಳಿಯ ಎಚ್‌ಸಿಜಿ ಎನ್‌ಎಂಆರ್ ಕ್ಯಾನ್ಸರ್ ಸೆಂಟರ್ ಆವರಣದಲ್ಲಿ ಸನ್ಮಾನ ನಡೆಸಲಾಯಿತು. ಸಮುದಾಯದ ಸುಧಾರಣೆಗೆ ಈ ಮಹಿಳೆಯರ ಅಮೂಲ್ಯ ಕೊಡುಗೆಗಳನ್ನು ಗುರುತಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿತ್ತು. ಕಾರ್ಯಕ್ರಮದಲ್ಲಿ ಕರ್ನಾಟಕ ಸರ್ಕಾರದ ಕಾರ್ಮಿಕ ಸಚಿವ ಸಂತೋಷ್ ಲಾಡ್, ಶಾಸಕ ಪ್ರಸಾದ್ ಅಬ್ಬಯ್ಯ, ಯುವ ಮುಖಂಡ ರಜತ್ ಉಳ್ಳಾಗಡ್ಡಿಮಠ್ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

ಹೆಲ್ತ್‌ಕೇರ್ ಗ್ಲೋಬಲ್ ಎಂಟರ್ಪ್ರೈಸಸ್ ಲಿಮಿಟೆಡ್ನ ಕರ್ನಾಟಕ ಪ್ರಾದೇಶಿಕ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮನೀಷಾ ಕುಮಾರ್ ಮಾತನಾಡಿ, "ಸಮುದಾಯದ ಯೋಗಕ್ಷೇಮಕ್ಕಾಗಿ ಸಮರ್ಪಿತವಾಗಿರುವ ಸಂಸ್ಥೆಯಾಗಿ, ಈ ಮಹಿಳೆಯರ ಅತ್ಯುತ್ತಮ ಸೇವೆಗಾಗಿ ಮತ್ತು ಸಮಾಜಕ್ಕಾಗಿ ಅವರ ಅಚಲ ಬದ್ಧತೆಗಾಗಿ ಅಂತಾರಾಷ್ಟ್ರೀಯ ಮಹಿಳಾ ದಿನದಂದು ಈ ಕಾರ್ಯಕ್ರಮವನ್ನು ಆಯೋಜಿಸಿದ್ದೇವೆ.

ಇವರ ಸುರಕ್ಷತೆ ಮತ್ತು ಆರೋಗ್ಯಕ್ಕೆ ಆದ್ಯತೆ ನೀಡಲು, ಅವರಿಗೆ ಎದುರಾಗಬಹುದಾದ ಆರೋಗ್ಯ ಸಮಸ್ಯೆಗಳನ್ನು ಸಮಯೋಚಿತವಾಗಿ ಪತ್ತೆಹಚ್ಚುವುದು ಮುಖ್ಯ. ಪ್ರತಿಯೊಬ್ಬರ ಕೊಡುಗೆಗಳನ್ನು ಗುರುತಿಸುವ ಮತ್ತು ಸಂಭ್ರಮಿಸುವ ಅಂತರ್ಗತ ಮತ್ತು ಪೂರಕ ವಾತಾವರಣ ಬೆಳೆಸುವುದು ನಮ್ಮ ಉದ್ದೇಶ," ಎಂದು ಅಭಿಪ್ರಾಯಪಟ್ಟರು.

ಹುಬ್ಬಳ್ಳಿಯ ಎಚ್‌ಸಿಜಿ ಎನ್-ಎಂಆರ್ ಕ್ಯಾನ್ಸರ್ ಸೆಂಟರ್ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಅಬ್ದುಲ್ ರಹೀಂ ಮಾತನಾಡಿ, ಅಂತಾರಾಷ್ಟ್ರೀಯ ಮಹಿಳಾ ದಿನವು ಮಹಿಳೆಯರ ಸಾಧನೆಗಳನ್ನು ಪ್ರತಿಬಿಂಬಿಸುವ, ಮತ್ತು ನಮ್ಮ ಸಮುದಾಯಗಳನ್ನು ರೂಪಿಸುವಲ್ಲಿ ಅವರ ಪ್ರಮುಖ ಪಾತ್ರವನ್ನು ಗುರುತಿಸುವ ಸಮಯವಾಗಿದೆ. ಸಮಯೋಚಿತ ಮತ್ತು ನಿಖರ ರೋಗಪತ್ತೆ ಮತ್ತು ಚಿಕಿತ್ಸೆಯನ್ನು ನೀಡಲು ಎಚ್‌ಸಿಜಿ ಆಸ್ಪತ್ರೆ ಬದ್ಧವಾಗಿದೆ. ಮುಂಚಿತವಾಗಿ ಪತ್ತೆಹಚ್ಚುವುದ-ರಿಂದ ಅಸಂಖ್ಯಾತ ಜೀವಗಳನ್ನು ಉಳಿಸಬಹುದು. ಈ ಕಾರ್ಯಕ್ರಮ ಮಹಿಳೆಯರನ್ನು, ಅವರ ಆರೋಗ್ಯವನ್ನು ರಕ್ಷಿಸಿಕೊಳ್ಳುವ ಮತ್ತು ಕ್ಯಾನ್ಸರ್ ವಿರುದ್ಧ ಹೋರಾಡುವ ತಿಳುವಳಿಕೆಯೊಂದಿಗೆ ಸಬಲೀಕರಣಗೊಳಿಸುವ ನಿಟ್ಟಿನಲ್ಲಿ ಒಂದು ಹೆಜ್ಜೆಯಾಗಿದೆ," ಎಂದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089